ಸಂಪುಟ: 11 ಸಂಚಿಕೆ: 173 ಪುಟ: 4+2 ಬೆಲೆ : 3.00 ಗುರುವಾರ, ಆಗಸ್ಟ್ 13, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 173 Pages : 4+2 Rate : 3.00 Thursday, August 13, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

### ಬರ ಘೋಷಣೆ, ಕುಡಿಯುವ ನೀರು, ಕೈಗಾರಿಕೆಉದ್ಯೋಗಕ್ಕೆ ಆಗ್ರಹಿಸಿ ಸರ್ಕಾರದ ಗಮನ ಸೆಳೆಯಲು 40 ಸಾವಿರ ಸಹಿ ಸಂಗ್ರಹ

# ಗದಗದ ಯುವಕರ ಕೈಯಲ್ಲಿ ರಕ್ತದ ಸಹಿ

**ವಿಜಯಸಾಕ್ಷಿ ಸುದ್ದಿ, ಗದಗ**

ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆದ ಜೆನ್-ಝಡ್ ಯುವಕರ ಹೋರಾಟ ದೇಶದ ಗಮನ ಸೆಳೆದ ಬೆನ್ನಲ್ಲೇ, ಅದೇ ಮಾದರಿಯಲ್ಲಿ ಗದಗ ಜಿಲ್ಲೆಯ ಯುವಪಡೆಯೂ ಹೋರಾಟದ ಹಾದಿ ಹಿಡಿದಿದೆ. ಜಿಲ್ಲೆಯನ್ನು ಬರಪೀಡಿತ ಎಂದು ಘೋಷಿಸಬೇಕು,

ಗದಗ-ಬೆಟಗೇರಿ ಅವಳಿ ನಗರಕ್ಕೆ ಸಮರ್ಪಕ ಕುಡಿಯುವ ನೀರು ಪೂರೈಸಬೇಕು ಹಾಗೂ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಿ ಯುವಕರಿಗೆ ಉದ್ಯೋಗ ಸೃಷ್ಟಿಸಬೇಕು ಎಂಬ ಪ್ರಮುಖ ಬೇಡಿಕೆಗಳೊಂದಿಗೆ ರಕ್ತ ಸಹಿ ಅಭಿಯಾನಟ ಆರಂಭವಾಗಿದೆ.

ಗದಗ-ಬೆಟಗೇರಿ ಅವಳಿ ನಗರದ ಜೆನ್-ಝಡ್ ಮತದಾರರು ಮತ್ತು ನಾಗರಿಕರ ವೇದಿಕೆ ನೇತೃತ್ವದಲ್ಲಿ ಆರಂಭವಾಗಿರುವ ಅಭಿಯಾನದಲ್ಲಿ 13 ಸಾವಿರಕ್ಕೂ ಹೆಚ್ಚು ಯುವಕರು ರಕ್ತದ ಮೂಲಕ ಸಹಿ ಹಾಕುವ ಗುರಿಯೊಂದಿಗೆ ಬೀದಿಗಿಳಿದಿದ್ದಾರೆ. ನಗರದ ಪ್ರತಿಯೊಂದು ವಾರ್ಡ್‌ಗೂ ತೆರಳಿ ಸಹಿ ಸಂಗ್ರಹಿಸಲಾಗುತ್ತಿದ್ದು, ಅಭಿಯಾನಕ್ಕೆ ವ್ಯಾಪಕ ಬೆಂಬಲ ವ್ಯಕ್ತವಾಗುತ್ತಿದೆ.

ಜಿಲ್ಲೆಯ ಏಳು ತಾಲೂಕುಗಳಲ್ಲೂ ಬರದ ಛಾಯೆ ಆವರಿಸಿದೆ ಎಂಬುದು ಯುವಕರ ಆರೋಪ. ಕೃಷಿಯನ್ನೇ ಪ್ರಮುಖವಾಗಿ ಅವಲಂಬಿಸಿರುವ ಜಿಲ್ಲೆಯ ಜನರು ಬೆಳೆ ನಷ್ಟದಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಹೀಗಿದ್ದರೂ ಗದಗನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಲು ಸರ್ಕಾರ ವಿಳಂಬ ಮಾಡುತ್ತಿದೆ ಎಂದು ಯುವಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.



**ಕುಡಿಯುವ ನೀರಿಗೆ ದಶಕಗಳ ಬೇಡಿಕೆ**

ಗದಗಬೆಟಗೇರಿ ಅವಳಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಹಲವು ವರ್ಷಗಳಿಂದ ಮುಂದುವರಿದಿದೆ. ಸಮರ್ಪಕ ಹಾಗೂ ನಿರಂತರ ಕುಡಿಯುವ ನೀರು ಪೂರೈಕೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂಬುದು ಯುವಕರ ಪ್ರಮುಖ ಆಗ್ರಹವಾಗಿದೆ.

ಇದರ ಜತೆಗೆ ಜಿಲ್ಲೆಯಲ್ಲಿ ದೊಡ್ಡ ಪ್ರಮಾಣದ ಕೈಗಾರಿಕೆಗಳ ಕೊರತೆಯಿಂದ ವಿದ್ಯಾವಂತ ಯುವಕರು ಉದ್ಯೋಗಕ್ಕಾಗಿ ಬೆಂಗಳೂರು, ಹುಬ್ಬಳ್ಳಿಧಾರವಾಡ ಸೇರಿದಂತೆ ವಿವಿಧ ನಗರಗಳಿಗೆ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ.

ಸ್ಥಳೀಯವಾಗಿಯೇ ಉದ್ಯೋಗ ಸೃಷ್ಟಿಸುವ ಕೈಗಾರಿಕೆಗಳನ್ನು ಸ್ಥಾಪಿಸಬೇಕು ಎಂದು ಅಭಿಯಾನ ಕಾರರು ಒತ್ತಾಯಿಸಿದ್ದಾರೆ.

**40 ಸಾವಿರ ರಕ್ತ ಸಹಿ ಸಂಗ್ರಹದ ಗುರಿ**

ಯುವ ಮುಖಂಡ ಅನಿಲ್ ಮೆಣಸಿನಕಾಯಿ ಅವರ ಮಾರ್ಗದರ್ಶನದಲ್ಲಿ ಆರಂಭವಾಗಿರುವ ಅಭಿಯಾನದಲ್ಲಿ ಸ್ವಯಂ ಪ್ರೇರಿತರಾಗಿ ಜಿಲ್ಲೆಯಾದ್ಯಂತ ಒಟ್ಟು 40 ಸಾವಿರ ರಕ್ತ ಸಹಿ ಸಂಗ್ರಹಿಸುವ ಗುರಿ ಹೊಂದಲಾಗಿದೆ. ಸಂಗ್ರಹಿಸಿದ ಸಹಿಗಳನ್ನು ರಾಜ್ಯ ಹಾಗೂ ಕೇಂದ್ರ ಸರ್ಕಾರದ ಗಮನಕ್ಕೆ ತಂದು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಲಾಗುವುದು ಎಂದು ಸಂಘಟಕರು ತಿಳಿಸಿದ್ದಾರೆ.

ರಕ್ತದಲ್ಲಿ ಸಹಿ ಹಾಕಿ ಸರ್ಕಾರದ ಗಮನ ಸೆಳೆಯುತ್ತಿರುವ ಯುವಕರ ಬೇಡಿಕೆಗೆ ಸರ್ಕಾರ ಸ್ಪಂದಿಸುತ್ತದೆಯೇ? ಇಲ್ಲವೇ ಹೋರಾಟ ಮತ್ತಷ್ಟು ತೀವ್ರಗೊಳ್ಳುತ್ತದೆಯೇ? ಎಂಬುದು ಇದೀಗ ಕುತೂಹಲ ಮೂಡಿಸಿದೆ.

## ಬೇಡಿಕೆಗಳು ಈಡೇರದಿದ್ದರೆ ಹೋರಾಟ ತೀವ್ರ?

ಜಿಲ್ಲೆಯ ಸುಮಾರು ಶೇ.80ರಷ್ಟು ಜನರು ಕೃಷಿಯನ್ನು ಅವಲಂಬಿಸಿದ್ದು, ಪ್ರಸಕ್ತ ಬರ ಪರಿಸ್ಥಿತಿಯಿಂದ ರೈತರು ಹಾಗೂ ಗ್ರಾಮೀಣ ಜನತೆ ಸಂಕಷ್ಟದಲ್ಲಿದ್ದಾರೆ. ಈ ಹಿನ್ನೆಲೆಯಲ್ಲಿ ಕೂಡಲೇ ಬರಪೀಡಿತ ಜಿಲ್ಲೆ ಎಂದು ಘೋಷಿಸಿ ಅಗತ್ಯ ಪರಿಹಾರ ಕ್ರಮ ಕೈಗೊಳ್ಳಬೇಕು. ಯುವಕರಿಗೆ ಸ್ಥಳೀಯವಾಗಿ ಉದ್ಯೋಗ ಸೃಷ್ಟಿಸಲು ಕೈಗಾರಿಕೆಗಳಿಗೆ ಉತ್ತೇಜನ ನೀಡಬೇಕು ಎಂಬುದು ಜೆನ್-ಝಡ್ ಯುವಪಡೆಯ ಆಗ್ರಹವಾಗಿದೆ.



**ಗದಗದ ಅಭಿವೃದ್ಧಿಗಾಗಿ ನಡೆಯುತ್ತಿರುವ ರಕ್ತದ ಸಹಿ ಅಭಿಯಾನ ಉತ್ತಮ ನಿರ್ಧಾರ. ಗದಗ ಜನತೆಯ ಮೂಲಸೌಕರ್ಯಕ್ಕಾಗಿ ಹಲವು ಬಾರಿ ಪ್ರತಿಭಟನೆ ನಡೆಸಿ, ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಜನತೆಯ ಹಕ್ಕುಗಳಿಗಾಗಿ ಜೆನ್-ಝಡ್ ಯುವಕರು ರಕ್ತದಲ್ಲಿ ಸಹಿ ಸಂಗ್ರಹಿಸುತ್ತಿರುವುದು ಕೊನೆಯ ಹೋರಾಟವಾಗಿದೆ.**

**- ರಾಣಿ ಚಂದಾವರಿ,** ಸಂಯುಕ್ತ ನೈತಿಕ ಮಾನವ ಹಕ್ಕುಗಳ ರಾಜ್ಯಾಧ್ಯಕ್ಷರು

**ಒಂದು ಕಡೆ ಬರದ ಸಂಕಷ್ಟ, ಮತ್ತೊಂದೆಡೆ ಉದ್ಯೋಗದ ಕೊರತೆ. ಯುವಕರು ವಲಸೆ ಹೋಗುವುದನ್ನು ತಪ್ಪಿಸಲು ಸರ್ಕಾರ ತಕ್ಷಣ ಸ್ಪಂದಿಸಬೇಕು. ನಮ್ಮ ಬೇಡಿಕೆ ಈಡೇರುವವರೆಗೆ ಹೋರಾಟ ಮುಂದುವರಿಯಲಿದೆ.**

**- ಆನಂದ ಅಂಗಡಿ,** ವಿದ್ಯಾರ್ಥಿ ಮುಖಂಡ

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಮಹಿಳೆಯರ ಪ್ರತಿಭಟನೆ; ಸಂತ್ರಸ್ತೆಗೆ ನ್ಯಾಯ, ಕುಟುಂಬಕ್ಕೆ ರಕ್ಷಣೆ ನೀಡುವಂತೆ ಡಿಸಿ, ಎಸ್ಪಿಗೆ ಮನವಿ

## ಸಾಮೂಹಿಕ ಅತ್ಯಾಚಾರ ಆರೋಪಿಗಳ ಬಂಧನಕ್ಕೆ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದಲ್ಲಿ ಯುವತಿಯೊಬ್ಬಳ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿ ಜೀವಬೆದರಿಕೆ ಹಾಕಿರುವ ಆರೋಪಿಗಳನ್ನು ಕೂಡಲೇ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಕರ್ನಾಟಕ ಸ್ವಾಭಿಮಾನಿ ಮಹಿಳಾ ವೇದಿಕೆ ವತಿಯಿಂದ ಮಹಿಳೆಯರು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಿದ ಮಹಿಳೆಯರು, ನಗರದ ಆರ್.ಕೆ. ನಗರದ ಓಣಿಯಲ್ಲಿ ವಾಸಿಸುತ್ತಿದ್ದ ಕುಟುಂಬದ ಯುವತಿಯ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿ ಜೀವಬೆದರಿಕೆ ಹಾಕಲಾಗಿದೆ ಎಂದು ಆರೋಪಿಸಿದರು. ಅಲ್ಲದೆ, ಕುಟುಂಬದವರ ಮೇಲೂ ಹಲ್ಲೆ ನಡೆಸಿ ಜೀವಬೆದರಿಕೆ ಹಾಕಿ ಅಲ್ಲಿಂದ ಹೊರಹಾಕಲಾಗಿದೆ ಎಂದು ದೂರಿದರು. ಈ ಕುರಿತು ಮಹಿಳಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಇಬ್ಬರು ಆರೋಪಿಗಳನ್ನು ಬಂಧಿಸಲಾಗಿದೆ. ಉಳಿದ ಆರೋಪಿಗಳನ್ನು ಕೂಡ ಶೀಘ್ರ ಪತ್ತೆಹಚ್ಚಿ ಬಂಧಿಸಬೇಕು. ಸಂತ್ರಸ್ತೆ ಹಾಗೂ ಕುಟುಂಬಕ್ಕೆ ಸೂಕ್ತ ರಕ್ಷಣೆ ಒದಗಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಕರ್ನಾಟಕ ಸ್ವಾಭಿಮಾನಿ ಮಹಿಳಾ ವೇದಿಕೆ ರಾಜ್ಯಾಧ್ಯಕ್ಷೆ ವಿಜಯಲಕ್ಷ್ಮೀ ಗದಗ ಮಾತನಾಡಿ, ಮಹಿಳೆಯರು, ಯುವತಿಯರು ಹಾಗೂ ಮಕ್ಕಳ ಮೇಲೆ ಇಂತಹ ದೌರ್ಜನ್ಯಗಳು ಮರುಕಳಿಸದಂತೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಪ್ರಕರಣದ ಎಲ್ಲ ಆರೋಪಿಗಳನ್ನು ಬಂಧಿಸಿ ಸಂತ್ರಸ್ತೆಗೆ ನ್ಯಾಯ ಒದಗಿಸುವ ಜತೆಗೆ ಕುಟುಂಬಕ್ಕೆ ರಕ್ಷಣೆ ನೀಡಬೇಕು ಎಂದು ಆಗ್ರಹಿಸಿದರು. ಜಿಲ್ಲಾಧ್ಯಕ್ಷೆ ಮಮತಾಜ ಕಟ್ಟಿಮನಿ ಮಾತನಾಡಿ, ದೌರ್ಜನ್ಯ ಎಸಗಿದ ಆರೋಪಿಗಳಿಗೆ ಕಠಿಣ ಶಿಕ್ಷೆಯಾಗಬೇಕು. ಇಂತಹ ಪ್ರಕರಣಗಳಲ್ಲಿ ಸಂತ್ರಸ್ತರಿಗೆ ನ್ಯಾಯ ದೊರೆಯುವಂತೆ ಕಾನೂನು ಪ್ರಕ್ರಿಯೆ ಪರಿಣಾಮಕಾರಿಯಾಗಿ ನಡೆಯಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ರಾಜ್ಯ ಉಪಾಧ್ಯಕ್ಷೆ ದಾವಲಬಿ ದೊಡ್ಡಮನಿ, ಜಿಲ್ಲಾ ಉಪಾಧ್ಯಕ್ಷರಾದ ಪರವೀನ ಹವಾಲ್ದಾರ, ವಜ್ರೇಶ್ವರಿ ಪವಾರ, ಖಜಾಂಚಿ ಪಾರ್ವತಿ ಪಾಟೀಲ, ವಕ್ತಾರೆ ನಾಗರತ್ನಾ ಬಣಕಾರ, ಸಂಚಾಲಕಿ ಸುಫಿಯಾ ನದಾಫ್, ಸಂಘಟನಾ ಕಾರ್ಯದರ್ಶಿ ಮಂಜುಳಾ ರೊಟ್ಟಿ, ಪ್ರಧಾನ ಕಾರ್ಯದರ್ಶಿ ಬಸೀರಾ ಕುಮನೂರ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ನೂರಾರು ಮಹಿಳೆಯರು ಭಾಗವಹಿಸಿದ್ದರು.

**ಎಲ್ಲ ಆರೋಪಿಗಳನ್ನು ಕೂಡಲೇ ಬಂಧಿಸಿ ಕಾನೂನಿನಡಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು. ಸಂತ್ರಸ್ತೆಗೆ ನ್ಯಾಯ ಹಾಗೂ ಕುಟುಂಬಕ್ಕೆ ರಕ್ಷಣೆ ನೀಡಬೇಕು. ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು.**

**- ವಿಜಯಲಕ್ಷ್ಮೀ ಗದಗ,** ರಾಜ್ಯಾಧ್ಯಕ್ಷೆ, ಕರ್ನಾಟಕ ಸ್ವಾಭಿಮಾನಿ ಮಹಿಳಾ ವೇದಿಕೆ

### ಸಚಿವ ಸಂಪುಟದಿಂದ ಕೈಬಿಡುವಂತೆ ಆಗ್ರಹಿಸಿ ಆ.17ರಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ

# ನಾಗೇಂದ್ರ ರಾಜೀನಾಮೆಗೆ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಗದಗ**

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರ್ಬಳಕೆ ಸೇರಿದಂತೆ ಹಲವು ಪ್ರಕರಣಗಳಲ್ಲಿ ಆರೋಪ ಎದುರಿಸುತ್ತಿರುವ ಬಿ. ನಾಗೇಂದ್ರ ಅವರನ್ನು ತಕ್ಷಣ ಸಚಿವ ಸಂಪುಟದಿಂದ ಕೈಬಿಡಬೇಕು ಎಂದು ಆಗ್ರಹಿಸಿ ಆ.17ರಿಂದ ರಾಜ್ಯದ ಎಲ್ಲ ಜಿಲ್ಲಾಧಿಕಾರಿ ಕಚೇರಿಗಳ ಎದುರು ಅನಿರ್ದಿಷ್ಟಾವಧಿ ಧರಣಿ ನಡೆಸಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಎಚ್ಚರಿಸಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಗೇಂದ್ರ ಅವರನ್ನು ಸಂಪುಟದಿಂದ ವಜಾಗೊಳಿಸುವಂತೆ ಒತ್ತಾಯಿಸಿ ಮಳೆಗಾಲದ ಅಧಿವೇಶನದ ಒಳಗೆ ಹಾಗೂ ಹೊರಗೆ ಹೋರಾಟ ಮುಂದುವರಿಸಲಾಗುವುದು ಎಂದರು.

ವಾಲ್ಮೀಕಿ ನಿಗಮದ ಸುಮಾರು ₹187 ಕೋಟಿ ಹಣ ದುರ್ಬಳಕೆಯಾಗಿದೆ ಎಂದು ಆರೋಪಿಸಿದ ಅವರು, ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ₹89 ಕೋಟಿ ಅಕ್ರಮ ನಡೆದಿದೆ ಎಂದು ಹೇಳಿದ್ದರು. ಹೀಗಿದ್ದರೂ ನಾಗೇಂದ್ರ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರ್ಪಡೆ ಮಾಡಿರುವುದಕ್ಕೆ ಕಾರಣವೇನು ಎಂಬುದನ್ನು ಕಾಂಗ್ರೆಸ್ ಹೈಕಮಾಂಡ್ ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ಆಡಳಿತಾವಧಿಯಲ್ಲಿ ಕೆ.ಎಸ್. ಈಶ್ವರಪ್ಪ ಅವರ ವಿರುದ್ಧ ಆರೋಪ ಕೇಳಿಬಂದಾಗ ರಾಜೀನಾಮೆ ಪಡೆಯಲಾಗಿತ್ತು. ಅದೇ ಮಾದರಿಯಲ್ಲಿ ನಾಗೇಂದ್ರ ಅವರಿಂದಲೂ ರಾಜೀನಾಮೆ ಪಡೆಯಬೇಕು. ಬಿಜೆಪಿಯನ್ನು ದಲಿತ ವಿರೋಧಿ ಎಂದು ಟೀಕಿಸುವ ಮೊದಲು ಬಸವರಾಜ ಬೊಮ್ಮಾಯಿ ಸರ್ಕಾರದ ಅವಧಿಯಲ್ಲಿ ದಲಿತರಿಗೆ ಮೀಸಲಾತಿ ಹೆಚ್ಚಿಸಿದ್ದನ್ನು ನಾಗೇಂದ್ರ ನೆನಪಿಸಿಕೊಳ್ಳಲಿ ಎಂದರು.

**31 ಪ್ರಕರಣಗಳ ತನಿಖೆ ನಡೆಯುತ್ತಿದ್ದರೂ ಮಂತ್ರಿಗಿರಿ ಏಕೆ?**

ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಮಾತ ನಾಡಿ, ಲೋಕಸಭಾ ಚುನಾವಣೆ ವೇಳೆ ವಾಲ್ಮೀಕಿ ನಿಗಮದ ಭ್ರಷ್ಟಾಚಾರದ ಹಣವನ್ನು ತೆಲಂಗಾಣದಲ್ಲಿ ಬಳಸಲಾಗಿದೆ ಎಂಬ ಶಂಕೆ ಇದೆ. ಸಿಬಿಐ, ಲೋಕಾಯುಕ್ತ, ಎಸ್‌ಐಟಿ ಹಾಗೂ ಸಿಐಡಿ ಸೇರಿದಂತೆ ವಿವಿಧ ತನಿಖಾ ಸಂಸ್ಥೆಗಳಲ್ಲಿ ಒಟ್ಟು 31 ಪ್ರಕರಣಗಳು ತನಿಖೆಯ ಹಂತದಲ್ಲಿದ್ದರೂ ನಾಗೇಂದ್ರ ಅವರನ್ನು ಮತ್ತೆ ಸಂಪುಟಕ್ಕೆ ಸೇರ್ಪಡೆ ಮಾಡಿಕೊಂಡಿರುವುದೇಕೆ? ಎಂದು ಪ್ರಶ್ನಿಸಿದರು.

ಈ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ರಾಜ್ಯ ಉಸ್ತುವಾರಿ ಸುರ್ಜೇವಾಲಾ ಅವರಿಗೂ ಪಾಲು ಇದೆಯೇ ಎಂಬ ಅನುಮಾನ ಮೂಡುತ್ತಿದೆ. ಸರ್ಕಾರ ಈ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ಎಂ.ಎಸ್. ಕರಿಗೌಡ್ರ, ಲಿಂಗರಾಜಗೌಡ ಪಾಟೀಲ, ಶ್ರೀಪತಿ ಉಡುಪಿ, ಬೂದಪ್ಪ ಹಳ್ಳಿ, ಮಂಜುನಾಥ ಮುಳಗುಂದ, ನಾಗರಾಜ ತಳವಾರ, ಎಂ.ಎಂ. ಹಿರೇಮಠ ಹಾಗೂ ಅನಿಲ ಅಬ್ಬಿಗೇರಿ ಉಪಸ್ಥಿತರಿದ್ದರು.

### ನೂರಾರು ವಿದ್ಯಾರ್ಥಿಗಳ ಹೆಜ್ಜೆಗೆ ಮೊಳಗಿದ ದೇಶಭಕ್ತಿ ಘೋಷಣೆ

# 100 ಮೀಟರ್ ತಿರಂಗದೊಂದಿಗೆ ಮೆರವಣಿಗೆ




**ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಾತಂತ್ರ್ಯೋತ್ಸವದ ಅಂಗವಾಗಿ ನಗರದಲ್ಲಿ ಬುಧವಾರ ಆಯೋಜಿಸಿದ್ದ ತಿರಂಗಾ ಯಾತ್ರೆ ಅದ್ದೂರಿಯಾಗಿ ನಡೆಯಿತು. ಬೃಹತ್ 100 ಮೀಟರ್ ಉದ್ದದ ರಾಷ್ಟ್ರಧ್ವಜವನ್ನು ಹಿಡಿದು ನೂರಾರು ವಿದ್ಯಾರ್ಥಿಗಳು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ದೇಶಭಕ್ತಿಯ ಮೆರೆದರು.

ಹಾತಲಗೇರಿ ನಾಕಾದಿಂದ ಆರಂಭಗೊಂಡ ಯಾತ್ರೆ, ಚೇತನಾ ಕ್ಯಾಂಟೀನ್, ಕೆ.ಸಿ. ರಾಣಿ ರಸ್ತೆ, ಕೆಸಿಸಿ ಬ್ಯಾಂಕ್, ರೋಟರಿ ವೃತ್ತ, ಹಳೆ ಬಸ್ ನಿಲ್ದಾಣ, ಹುಯಿಲಗೋಳ ನಾರಾಯಣ ವೃತ್ತ ಹಾಗೂ ಮಹೇಂದ್ರಕರ ವೃತ್ತದ ಮೂಲಕ ಸಾಗಿ ತೋಂಟದಾರ್ಯ ಮಠದ ಮುಂಭಾಗದಲ್ಲಿ ಮುಕ್ತಾಯಗೊಂಡಿತು.

ತಿರಂಗ ಹಿಡಿದು ಹೆಜ್ಜೆ ಹಾಕಿದ ವಿದ್ಯಾರ್ಥಿಗಳು ಶಾಲಾ-ಕಾಲೇಜುಗಳ ನೂರಾರು ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡಿದ್ದು, ಬೃಹತ್ ತಿರಂಗವನ್ನು ಹೆಮ್ಮೆಯಿಂದ ಹಿಡಿದು ಸಾಗಿದ ದೃಶ್ಯ ಸಾರ್ವಜನಿಕರ ಗಮನ ಸೆಳೆಯಿತು.

ಯಾತ್ರೆಯುದ್ದಕ್ಕೂ ದೇಶಭಕ್ತಿ ಗೀತೆಗಳು ಹಾಗೂ ಘೋಷಣೆಗಳು ಮೊಳಗಿದವು.

ನಿವೃತ್ತ ಸೈನಿಕರು, ಮಹಿಳೆಯರು, ಸಾಹಿತಿಗಳು, ಕಲಾವಿದರು, ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು, ಸಮಾಜಸೇವಕರು ಸೇರಿದಂತೆ ಸಾರ್ವಜನಿಕರು ಯಾತ್ರೆಯಲ್ಲಿ ಪಾಲ್ಗೊಂಡರು.

ಪಕ್ಷಾತೀತ ಹಾಗೂ ಜಾತ್ಯತೀತವಾಗಿ ನಡೆದ ಯಾತ್ರೆಯಲ್ಲಿ ವಿವಿಧ ವರ್ಗದ ಜನರು ಒಂದಾಗಿ ಹೆಜ್ಜೆ ಹಾಕಿದ್ದು ವಿಶೇಷವಾಗಿತ್ತು.

ನಗರದ ಪ್ರಮುಖ ರಸ್ತೆಗಳಲ್ಲಿ ತಿರಂಗದ ವೈಭವ ಕಂಗೊಳಿಸಿದ್ದು, ಸಾರ್ವಜನಿಕರು ಯಾತ್ರೆಯನ್ನು ಕಣ್ತುಂಬಿಕೊಂಡರು. ಸ್ವಾತಂತ್ರ್ಯಕ್ಕಾಗಿ ತ್ಯಾಗ ಮಾಡಿದ ಮಹನೀಯರನ್ನು ಸ್ಮರಿಸುವುದರ ಜತೆಗೆ ಯುವಜನರಲ್ಲಿ ರಾಷ್ಟ್ರಾಭಿಮಾನ ಮತ್ತು ದೇಶಭಕ್ತಿಯ ಭಾವನೆ ಬೆಳೆಸುವ ಸಂದೇಶವನ್ನು ತಿರಂಗಾ ಯಾತ್ರೆ ಸಾರಿತು.

### ಲಕ್ಕುಂಡಿ ಗ್ರಾ.ಪಂ. ಎದುರು ಎರಡು ದಿನ ಪ್ರತಿಭಟನೆ ಮೂಲಸೌಕರ್ಯ ವೈಫಲ್ಯಕ್ಕೆ ಗ್ರಾಮಸ್ಥರ ಆಕ್ರೋಶ;

## ಇಬ್ಬರು ಅಧಿಕಾರಿಗಳ ಬದಲಾವಣೆ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಐತಿಹಾಸಿಕ ಲಕ್ಕುಂಡಿ ಗ್ರಾಮದಲ್ಲಿ ಸಮರ್ಪಕ ಮೂಲಭೂತ ಸೌಲಭ್ಯ ಕಲ್ಪಿಸುವಲ್ಲಿ ಗ್ರಾಮ ಪಂಚಾಯಿತಿ ಆಡಳಿತ ವಿಫಲವಾಗಿದೆ ಎಂದು ಆರೋಪಿಸಿ ಗ್ರಾಮಸ್ಥರು ನಡೆಸಿದ ಎರಡು ದಿನಗಳ ಪ್ರತಿಭಟನೆಗೆ ಸ್ಪಂದಿಸಿದ ತಾಲೂಕು ಪಂಚಾಯಿತಿ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿ ಶರಣು ಗೋಗೇರಿ ಅವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಿ, ಪಿಡಿಒ ಅಮೀರನಾಯಕ ಅವರ ವರ್ಗಾವಣೆಗೆ ಕ್ರಮ ಕೈಗೊಂಡಿದ್ದಾರೆ.

ಅಸಮರ್ಪಕ ಕುಡಿಯುವ ನೀರು ಪೂರೈಕೆ, ಅವೈಜ್ಞಾನಿಕ ಜೆಜೆಎಂ ಕಾಮಗಾರಿ, ರಸ್ತೆಗಳ ಅಸ್ವಚ್ಛತೆ, ಬೀದಿ ದೀಪಗಳ ಸಮಸ್ಯೆ, ರಾಜಬೀದಿ ದುರಸ್ತಿ, ಸಿಬ್ಬಂದಿಗೆ ವೇತನ ಪಾವತಿಯಲ್ಲಿ ವಿಳಂಬ ಹಾಗೂ ಸಿಬ್ಬಂದಿಯ ಮೇಲೆ ಅಧಿಕಾರಿಗಳ ಹಿಡಿತವಿಲ್ಲದಿರುವುದು ಸೇರಿದಂತೆ ಹಲವು ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಗ್ರಾಮಸ್ಥರು ಗ್ರಾ.ಪಂ. ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯ ಹಿನ್ನೆಲೆಯಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಚ್.ಎಸ್. ಜನಗಿ ಸ್ಥಳಕ್ಕೆ ಆಗಮಿಸಿ ಗ್ರಾಮಸ್ಥರ ಅಹವಾಲು ಆಲಿಸಿದರು. ಗ್ರಾಮಸ್ಥರು ಕಳೆದ ಆರು ತಿಂಗಳಿಂದ ಗ್ರಾಮದ ಅಭಿವೃದ್ಧಿ ಕುಂಠಿತಗೊಂಡಿದ್ದು, ಆಡಳಿತಾಧಿಕಾರಿ ಹಾಗೂ ಪಿಡಿಒ ನಡುವೆ ಸಮನ್ವಯದ ಕೊರತೆಯಿಂದ ಸಮಸ್ಯೆಗಳು ಮತ್ತಷ್ಟು ಬಿಗಡಾಯಿಸಿವೆ ಎಂದು ಆರೋಪಿಸಿದರು.

ಗ್ರಾಮಸ್ಥರ ಅಸಮಾಧಾನ ಆಲಿಸಿದ ಬಳಿಕ ಅಧಿಕಾರಿಗಳು ಆಡಳಿತಾಧಿಕಾರಿ ಶರಣು ಗೋಗೇರಿ ಅವರಿಂದ ಕರ್ತವ್ಯ ಬಿಡುಗಡೆ ಪತ್ರ, ಹಾಗೂ ಪಿಡಿಒ ಅಮೀರನಾಯಕ ಅವರಿಂದ ವರ್ಗಾವಣೆ ಮನವಿ ಪತ್ರ ಪಡೆದುಕೊಂಡರು.

ಲಕ್ಕುಂಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕುಡಿಯುವ ನೀರು, ರಸ್ತೆ ಅಭಿವೃದ್ಧಿ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಜಿ.ಪಂ. ಹಾಗೂ ತಾ.ಪಂ. ಮಟ್ಟದಲ್ಲಿ ಅಗತ್ಯ ಅನುದಾನವಿದ್ದು, ಅದನ್ನು ಸಮರ್ಪಕವಾಗಿ ಬಳಸಿಕೊಂಡು ಐತಿಹಾಸಿಕ ಲಕ್ಕುಂಡಿ ಗ್ರಾಮದ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲಾಗುವುದು ಎಂದು ಡಾ. ಎಚ್.ಎಸ್. ಜನಗಿ ಭರವಸೆ ನೀಡಿದರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಎಂ.ಎನ್. ಉಮಚಗಿ, ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ ಹಾಗೂ ನಜೀರಅಹ್ಮದ ಕಿರಿಟಗೇರಿ ಮಾತನಾಡಿ, ಗ್ರಾಮದ ಸಮಸ್ಯೆಗಳ ಕುರಿತು ಹಲವು ಬಾರಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಪ್ರತಿಭಟನೆ ಅನಿವಾರ್ಯವಾಯಿತು ಎಂದರು.ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಪರಿಸ್ಥಿತಿಯ ಗಂಭೀರತೆಯನ್ನು ಅರಿತು ಇಬ್ಬರು ಅಧಿಕಾರಿಗಳ ಬದಲಾವಣೆಗೆ ಕ್ರಮ ಕೈಗೊಂಡು, ಲಕ್ಕುಂಡಿ ಗ್ರಾಮದ ಅಭಿವೃದ್ಧಿಗೆ ವಿಶೇಷ ಕಾಳಜಿ ವಹಿಸುವ ಭರವಸೆ ನೀಡಿರುವುದರಿಂದ ಪ್ರತಿಭಟನೆ ಹಿಂಪಡೆಯಲಾಗಿದೆ ಎಂದು ತಿಳಿಸಿದರು.

ಪ್ರತಿಭಟನೆ ಸಂದರ್ಭದಲ್ಲಿ ವಿಬಿಜಿ ರಾಮ್‌ಜಿ ಸಹಾಯಕ ನಿರ್ದೇಶಕ ಕುಮಾರ ಪೂಜಾರ, ಕಾರ್ಯದರ್ಶಿ ಗಣೇಶ ಪೂಜಾರ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಶಿವಪ್ಪ ಸಜ್ಜನರ, ಗ್ರಾ.ಪಂ. ಮಾಜಿ ಸದಸ್ಯ ಬಿ.ಬಿ. ಮಾಡಲಗೇರಿ, ಮರಿಯಪ್ಪ ವಡ್ಡರ, ಕಳಕೇಶ ಟೆಂಗಿನಕಾಯಿ, ಚಂದ್ರಗೌಡ ಪಾಟೀಲ, ಚನ್ನಪ್ಪ ಹುಬ್ಬಳ್ಳಿ, ಬಸವರಾಜ ಮುಳ್ಳಾಳ, ಬಸವರಾಜ ಕವಲೂರು, ಪ್ರವೀಣ ಕಲಾಲ, ವಿನಾಯಕ ಡಿಗ್ಗಾವಿ, ಮಂಜುನಾಥ ತಡಹಾಳ, ಬಸವರಾಜ ಕುಂಬಾರ, ವೀರಣ್ಣ ಅರಹುಣಶಿ, ಶಿವಪ್ಪ ಭಜಂತ್ರಿ, ರವಿ ಕವಲೂರು ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



## ಗದಗ ಉತ್ಸವ-2026ರಲ್ಲಿ ಆನಂದ ಪೋತ್ನೀಸ್ ಹಾಗೂ ಈಶಣ್ಣ ಮುನವಳ್ಳಿಗೆ ಜೀವಮಾನ ಸಾಧನೆ ಪ್ರಶಸ್ತಿ

# ಸೇವೆಯ ಹಾದಿಯಲ್ಲಿ ಸಾರ್ಥಕ ಪಯಣ; ಇಬ್ಬರು ಸಾಧಕರಿಗೆ ಜೀವಮಾನ ಗೌರವ

ವೃತ್ತಿಯಲ್ಲಿ ಯಶಸ್ಸು ಗಳಿಸುವುದು ಒಂದು ಸಾಧನೆಯಾದರೆ, ಆ ಯಶಸ್ಸನ್ನು ಸಮಾಜದ ಒಳಿತಿಗೆ ಬಳಸುವುದು ಅದಕ್ಕಿಂತ ದೊಡ್ಡ ಸಾಧನೆ. ವೃತ್ತಿಪರ ಬದ್ಧತೆ, ಉದ್ಯಮಶೀಲತೆ, ಸಂಘಟನಾ ನಾಯಕತ್ವ, ಶಿಕ್ಷಣ, ಆರೋಗ್ಯ, ಸಾಮಾಜಿಕ ಹಾಗೂ ಧಾರ್ಮಿಕ ಕ್ಷೇತ್ರಗಳ ಸೇವೆಯನ್ನು ಜೀವನದ ಭಾಗವಾಗಿಸಿಕೊಂಡಿರುವ ಆನಂದ ಲಕ್ಷ್ಮಣರಾವ್ ಪೋತ್ನೀಸ್ ಮತ್ತು ಈಶ್ವರಪ್ಪ ಚಂದ್ರಶೇಖರಪ್ಪ ಮುನವಳ್ಳಿ (ಈಶಣ್ಣ ಮುನವಳ್ಳಿ) ಅವರ ಸೇವೆಗೆ ಇದೀಗ ಮತ್ತೊಂದು ಪ್ರತಿಷ್ಠಿತ ಗೌರವ ಸಂದಿದೆ.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ವತಿಯಿಂದ ಆ.14ರಿಂದ 18ರವರೆಗೆ ನಡೆಯಲಿರುವ ಗದಗ ಉತ್ಸವ2026'ರ ಅಂಗವಾಗಿ ಆ.16ರಂದು ನಡೆಯುವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಈ ಇಬ್ಬರು ಹಿರಿಯ ಸಾಧಕರಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.

ಉದ್ಯಮವಾಣಿಜ್ಯ ಕ್ಷೇತ್ರದ ಬೆಳವಣಿಗೆಗೆ ಕೊಡುಗೆ ನೀಡುವುದರ ಜತೆಗೆ ಸಮಾಜಮುಖಿ ಕಾರ್ಯಗಳಲ್ಲಿ ತಮ್ಮದೇ ಛಾಪು ಮೂಡಿಸಿರುವ ಇಬ್ಬರ ಸೇವಾ ಪಯಣ ಗದಗದ ಸಾರ್ವಜನಿಕ ಬದುಕಿನ ಹಲವು ಆಯಾಮಗಳನ್ನು ಒಳಗೊಂಡಿದೆ.

### ವೃತ್ತಿಯ ಶಿಸ್ತು, ಸಮಾಜದ ಕಾಳಜಿ; ಆನಂದ ಪೋತ್ನೀಸ್

ಹಿರಿಯ ಲೆಕ್ಕಪರಿಶೋಧಕರಾಗಿ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ವೃತ್ತಿಪರ ಸೇವೆ ಸಲ್ಲಿಸಿರುವ ಆನಂದ ಲಕ್ಷ್ಮಣರಾವ್ ಪೋತ್ನೀಸ್ ಅವರ ಕಾರ್ಯಕ್ಷೇತ್ರ ಕೇವಲ ಲೆಕ್ಕಪರಿಶೋಧನೆಗೆ ಸೀಮಿತವಾಗಿಲ್ಲ. ಶಿಕ್ಷಣ, ಉದ್ಯಮ, ಆರೋಗ್ಯ, ಸಹಕಾರ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿಯೂ ಅವರು ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ.

15 ಮೇ 1959ರಂದು ಜನಿಸಿದ ಅವರು ಬಿಕಾಂ ಹಾಗೂ ಎಫ್‌ಸಿಎ ಪದವಿ ಪಡೆದಿದ್ದು, 17 ಫೆಬ್ರವರಿ 1982ರಂದು ಚಾರ್ಟರ್ಡ್ ಅಕೌಂಟೆಂಟ್ ಆಗಿ ವೃತ್ತಿ ಜೀವನ ಆರಂಭಿಸಿದರು. ಪ್ರಸ್ತುತ ಮೆ. ಎ. ರಾಘವೇಂದ್ರ ರಾವ್ ಅಸೋಸಿಯೇಟ್ಸ್' ಸಂಸ್ಥೆಯ ಪಾಲುದಾರರಾಗಿ ಸೇವೆ ಸಲ್ಲಿಸುತ್ತಿರುವ ಅವರು ಲೆಕ್ಕಪರಿಶೋಧನೆ ಹಾಗೂ ಮಾಹಿತಿ ವ್ಯವಸ್ಥೆಗಳ ಆಡಿಟ್ ಕ್ಷೇತ್ರದಲ್ಲಿ ಪರಿಣತಿ ಹೊಂದಿದ್ದಾರೆ.

ವೃತ್ತಿಯ ಜತೆಗೆ ಸಾಮಾಜಿಕ ಸೇವೆಯಲ್ಲಿಯೂ ತಮ್ಮನ್ನು ತೊಡಗಿಸಿಕೊಂಡಿರುವ ಪೋತ್ನೀಸ್ ಅವರು ಲಯನ್ಸ್ ಕ್ಲಬ್ಸ್ ಇಂಟರ್‌ನ್ಯಾಷನಲ್, ಜಿಲ್ಲೆ 324ಡಿ2ರಲ್ಲಿ ವೈಸ್ ಡಿಸ್ಟ್ರಿಕ್ಟ್ ಗವರ್ನರ್ ಹಾಗೂ ಜಿಲ್ಲಾ ಗವರ್ನರ್ ಆಗಿ ಸೇವೆ ಸಲ್ಲಿಸಿದ್ದಾರೆ. ಗದಗಬೆಟಗೇರಿ ಲಯನ್ಸ್ ಕ್ಲಬ್ ಸೇರಿದಂತೆ ವಿವಿಧ ಸಂಘಸಂಸ್ಥೆಗಳ ಜವಾಬ್ದಾರಿಗಳನ್ನು ನಿರ್ವಹಿಸಿದ್ದಾರೆ.

ಶಿಕ್ಷಣ ಕ್ಷೇತ್ರದಲ್ಲಿಯೂ ಪೋತ್ನೀಸ್ ಅವರ ಸೇವೆ ಗಮನಾರ್ಹ. ಆದರ್ಶ ಶಿಕ್ಷಣ ಸಮಿತಿ, ಗದಗಬೆಟಗೇರಿ ಲಯನ್ಸ್ ಎಜುಕೇಶನ್ ಸೊಸೈಟಿ, ವಿವೇಕಾನಂದ ಪಿಯು ವಿಜ್ಞಾನ ವಸತಿ ಕಾಲೇಜು ಹಾಗೂ ಎ.ಎಸ್. ಎಸ್. ಕಾಲೇಜ್ ಆಫ್ ಕಾಮರ್ಸ್ ಹಳೆಯ ವಿದ್ಯಾರ್ಥಿಗಳ ಸಂಘ ಸೇರಿದಂತೆ ಹಲವು ಸಂಸ್ಥೆಗಳಲ್ಲಿ ನಾಯಕತ್ವದ ಜವಾಬ್ದಾರಿ ವಹಿಸಿದ್ದಾರೆ.

202021ರಲ್ಲಿ ಗದಗ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಅವಧಿಯಲ್ಲಿ ಕೈಗಾರಿಕಾ ಪ್ರದರ್ಶನ ಸಮಿತಿಯ ಅಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿ, ಸ್ಥಳೀಯ ವ್ಯಾಪಾರ, ಉದ್ಯಮ ಹಾಗೂ ಕೈಗಾರಿಕಾ ಚಟುವಟಿಕೆಗಳಿಗೆ ಉತ್ತೇಜನ ನೀಡಿದರು.

ಸಹಕಾರ ಕ್ಷೇತ್ರದಲ್ಲಿ ರಡ್ಡಿ ಕೋ-ಆಪ್ ಬ್ಯಾಂಕ್ ಲಿಮಿಟೆಡ್, ಧಾರವಾಡದ ನಿರ್ದೇಶಕರಾಗಿ ಸೇವೆ ಸಲ್ಲಿಸಿರುವ ಅವರು, ಗದಗದ ಪಿ.ಜಿ. ಕೇಂದ್ರದಲ್ಲಿ ಕಾರ್ಪೊರೇಟ್ ತೆರಿಗೆ ಯೋಜನೆ ಕುರಿತು ಸಂಪನ್ಮೂಲ ಅಧ್ಯಾಪಕರಾಗಿಯೂ ಕಾರ್ಯನಿರ್ವಹಿಸಿದ್ದಾರೆ.





ಶ್ರೀ ವೀರನಾರಾಯಣ, ಶ್ರೀ ತ್ರಿಕೂಟೇಶ್ವರ ಹಾಗೂ ಜುಮ್ಮಾ ಮಸೀದಿ ಟ್ರಸ್ಟ್ ಕಮಿಟಿಯ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿರುವುದು ಅವರ ಸಾಮಾಜಿಕ ಬದ್ಧತೆಗೆ ಮತ್ತೊಂದು ಉದಾಹರಣೆ.

ಸಂಕಲ್ಪ ಕಿಡ್ನಿ ಕೇರ್ ಫೌಂಡೇಶನ್' ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಆನಂದ ಪೋತ್ನೀಸ್, ಮೂತ್ರಪಿಂಡ ಕಸಿ ಅಗತ್ಯವಿರುವವರಿಗೆ ಆರ್ಥಿಕ ನೆರವು ದೊರಕಿಸುವ ಹಾಗೂ ಅಂಗಾಂಗ ದಾನದ ಕುರಿತು ಜಾಗೃತಿ ಮೂಡಿಸುವ ಕಾರ್ಯದಲ್ಲೂ ತೊಡಗಿಸಿಕೊಂಡಿದ್ದಾರೆ.

ವೃತ್ತಿಪರತೆ, ಸಂಘಟನಾ ಸಾಮರ್ಥ್ಯ ಹಾಗೂ ಸಮಾಜಮುಖಿ ಚಿಂತನೆಯ ಸಮನ್ವಯವಾಗಿರುವ ಅವರ ಸೇವೆಯನ್ನು ಗುರುತಿಸಿ ನೀಡಲಾಗುತ್ತಿರುವ ಜೀವಮಾನ ಸಾಧನೆ ಪ್ರಶಸ್ತಿ, ಗದಗದ ವಾಣಿಜ್ಯ ಹಾಗೂ ಸಾರ್ವಜನಿಕ ಬದುಕಿಗೆ ಸಲ್ಲಿಸಿದ ಕೊಡುಗೆಗೆ ಸಂದ ಗೌರವವಾಗಿದೆ.

### ಉದ್ಯಮದ ಜತೆಗೆ ಸಮಾಜಸೇವೆ; ಈಶಣ್ಣ ಮುನವಳ್ಳಿಯ ವಿಭಿನ್ನ ಪಯಣ

ಉದ್ಯಮ ಕ್ಷೇತ್ರದಲ್ಲಿ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಸಕ್ರಿಯರಾಗಿರುವ ಈಶ್ವರಪ್ಪ ಚಂದ್ರಶೇಖರಪ್ಪ ಮುನವಳ್ಳಿ (ಈಶಣ್ಣ ಮುನವಳ್ಳಿ) ಅವರ ಸೇವಾ ಪಯಣ ಉದ್ಯಮದ ಗಡಿಯನ್ನು ಮೀರಿ ಶಿಕ್ಷಣ, ಸಮಾಜಸೇವೆ ಹಾಗೂ ಧಾರ್ಮಿಕ ಕ್ಷೇತ್ರಗಳಿಗೂ ವಿಸ್ತರಿಸಿದೆ.

4 ಮೇ 1966ರಂದು ಕೊಪ್ಪಳದಲ್ಲಿ ಜನಿಸಿದ ಅವರು ಗದಗದ ಎಸ್.ಎಸ್. ಕಾಮರ್ಸ್ ಕಾಲೇಜಿನಲ್ಲಿ ಬಿಕಾಂ ಪದವಿ ಪಡೆದಿದ್ದಾರೆ. 1985ರಲ್ಲಿ ಗಂಗಾವತಿಯ ಸಿದ್ಧಲಿಂಗೇಶ್ವರ ರೈಸ್ ಮಿಲ್ ಮೂಲಕ ಉದ್ಯಮ ಕ್ಷೇತ್ರಕ್ಕೆ ಪ್ರವೇಶಿಸಿದ ಅವರು, ನಂತರ ವಿವಿಧ ಉದ್ಯಮಗಳನ್ನು ಸ್ಥಾಪಿಸುವ ಮೂಲಕ ತಮ್ಮ ವ್ಯಾಪಾರ ವಲಯವನ್ನು ವಿಸ್ತರಿಸಿಕೊಂಡರು.

1993ರಲ್ಲಿ ಸಿದ್ಧಲಿಂಗೇಶ್ವರ ಟ್ರೇಡರ್ಸ್, 1998ರಲ್ಲಿ ಸಿ.ಆರ್. ಮುನವಳ್ಳಿ ಸನ್ಸ್ ಹಾಗೂ ಈಶ್ವರ ಎಂಟರ್‌ಪ್ರೈಸಸ್, 2002ರಲ್ಲಿ ಪೆಟ್ರೋಲ್ ಬಂಕ್, 2013ರಲ್ಲಿ ಹಾತಲಗೇರಿಯಲ್ಲಿ ಕಚ್ಚಾಪಾಲಿಶ್ ಮಿಲ್ ಹಾಗೂ ಸೋಲಾರ್ ಉದ್ಯಮ ಸ್ಥಾಪಿಸಿ ಉದ್ಯಮ ಕ್ಷೇತ್ರದಲ್ಲಿ ತಮ್ಮದೇ ಛಾಪು ಮೂಡಿಸಿದ್ದಾರೆ.

202324ರಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ ಸಂದರ್ಭದಲ್ಲಿ ಸ್ಥಗಿತಗೊಂಡಿದ್ದ ಚೇಂಬರ್ ಪತ್ರಿಕೆಯನ್ನು ಪುನರಾರಂಭಿಸುವ ಮೂಲಕ ಸಂಸ್ಥೆಯ ಚಟುವಟಿಕೆಗಳಿಗೆ ಹೊಸ ಚೈತನ್ಯ ನೀಡಿದರು.

ಉದ್ಯಮದ ಜತೆಗೆ ಸಮಾಜಸೇವೆಯಲ್ಲೂ ಸಕ್ರಿಯರಾಗಿರುವ ಅವರು, ವೀರಶೈವಲಿಂಗಾಯತ ರುದ್ರಭೂಮಿಗೆ ಸ್ವಂತ ಶವಸಂಸ್ಕಾರ ವಾಹನ ಹಾಗೂ ಜೆಸಿಬಿ ವ್ಯವಸ್ಥೆ ಕಲ್ಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ.

ರೋಟರಿ ಕ್ಲಬ್‌ಗೆ ಸ್ವಂತ ಕಟ್ಟಡ ನಿರ್ಮಾಣದಲ್ಲಿಯೂ ಕೊಡುಗೆ ನೀಡಿರುವ ಅವರು, ಜಿಲ್ಲಾ ಬಣಜಿಗ ಸಮಾಜದ ಅಧ್ಯಕ್ಷರಾಗಿ ಸಂಭಾಪುರ ರಸ್ತೆಯಲ್ಲಿ ಸುಮಾರು ₹5 ಕೋಟಿ ವೆಚ್ಚದ ಸಮಾಜದ ಸ್ವಂತ ಕಟ್ಟಡ ನಿರ್ಮಾಣಕ್ಕೆ ಮುಂದಾಳತ್ವ ವಹಿಸಿದ್ದಾರೆ.

ಕೆಎಲ್‌ಇ ಸಂಸ್ಥೆಯ ವಿವಿಧ ಕಾಲೇಜುಗಳ ಆಡಳಿತ ಮಂಡಳಿ ಸದಸ್ಯರಾಗಿ, ಎಡೆಯೂರು ಹಾಗೂ ಹಾಲಕೇರಿ ಮಠಗಳ ಸದಸ್ಯರಾಗಿ ಹಾಗೂ ಬಸವೇಶ್ವರ ಮತ್ತು ಡಾ. ಪ್ರಭಾಕರ ಕೋರೆ ಬ್ಯಾಂಕ್‌ಗಳ ಸಲಹೆಗಾರರಾಗಿ ಸೇವೆ ಸಲ್ಲಿಸಿದ್ದಾರೆ.

ಸುಮಾರು 8 ಸಾವಿರ ಜನರಿಗೆ ಉಚಿತ ಆರೋಗ್ಯ ಶಿಬಿರದ ಪ್ರಯೋಜನ ದೊರಕುವಂತೆ ಮಾಡಿರುವ ಅವರು, ಎಡೆಯೂರು ದಾಸೋಹ ಟ್ರಸ್ಟ್ ಹಾಗೂ ಬೆಂಗಳೂರಿನ ಕಲ್ಯಾಣ ಮಂಟಪಕ್ಕೆ ಸ್ವಂತ ವೆಚ್ಚದಲ್ಲಿ ಕೊಠಡಿಗಳ ನಿರ್ಮಾಣಕ್ಕೂ ಸಹಕರಿಸಿದ್ದಾರೆ.

ಉದ್ಯಮದ ಯಶಸ್ಸಿನ ಜತೆಗೆ ಸಮಾಜದ ಅಗತ್ಯಗಳಿಗೆ ಸ್ಪಂದಿಸುವ ಮನೋಭಾವವನ್ನು ಬೆಳೆಸಿಕೊಂಡಿರುವ ಈಶಣ್ಣ ಮುನವಳ್ಳಿಯವರಿಗೆ ಸಂದಿರುವ ಜೀವಮಾನ ಸಾಧನೆ ಪ್ರಶಸ್ತಿ, ಅವರ ಬಹುಮುಖ ಸೇವೆಗೆ ಸಂದಿರುವ ಗೌರವವಾಗಿದೆ.

ಒಬ್ಬರು ವೃತ್ತಿಪರ ಸೇವೆ, ಶಿಕ್ಷಣ, ಆರೋಗ್ಯ ಮತ್ತು ಸಂಘಟನಾ ಕ್ಷೇತ್ರಗಳಲ್ಲಿ ತಮ್ಮದೇ ಕೊಡುಗೆ ನೀಡಿದ್ದರೆ, ಮತ್ತೊಬ್ಬರು ಉದ್ಯಮ, ಸಮಾಜಸೇವೆ, ಶಿಕ್ಷಣ ಮತ್ತು ಧಾರ್ಮಿಕ ಕ್ಷೇತ್ರಗಳಲ್ಲಿ ತಮ್ಮ ಹೆಜ್ಜೆ ಗುರುತು ಮೂಡಿಸಿದ್ದಾರೆ.

ಗದಗದ ವಾಣಿಜ್ಯಉದ್ಯಮ ಕ್ಷೇತ್ರದ ಬೆಳವಣಿಗೆಯೊಂದಿಗೆ ಸಮಾಜದ ವಿವಿಧ ವಲಯಗಳಿಗೂ ತಮ್ಮ ಸೇವೆಯನ್ನು ವಿಸ್ತರಿಸಿರುವ ಈ ಇಬ್ಬರು ಹಿರಿಯ ಸಾಧಕರನ್ನು ಒಂದೇ ವೇದಿಕೆಯಲ್ಲಿ ಗೌರವಿಸುತ್ತಿರುವುದು ಗದಗ ಉತ್ಸವ2026'ರ ಪ್ರಶಸ್ತಿ ಪ್ರದಾನ ಸಮಾರಂಭದ ವಿಶೇಷತೆಯಾಗಿದೆ.


ಆ.16ರಂದು ನಡೆಯುವ ಸಮಾರಂಭದಲ್ಲಿ ಆನಂದ ಪೋತ್ನೀಸ್ ಹಾಗೂ ಈಶಣ್ಣ ಮುನವಳ್ಳಿ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ಪ್ರದಾನವಾಗಲಿದೆ.

**– ಈರಣ್ಣ ಮುದಗಲ್, ನಾಗರಾಜ ನರಗುಂದ**
ಉತ್ಸವದ ಪ್ರಚಾರ ಸಮಿತಿ

---

**ಸಂಕ್ಷಿಪ್ತ ಸುದ್ದಿಗಳು**

## ನಟಿ ರನ್ಯಾ ರಾವ್ ಗೋಲ್ಡ್ ಸ್ಮಗ್ಲಿಂಗ್ ಪ್ರಕರಣ: ಸಿಸಿಟಿವಿ ದೃಶ್ಯ ನೀಡಲು ಹೈಕೋರ್ಟ್ ಸೂಚನೆ




**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಚಿನ್ನ ಕಳ್ಳಸಾಗಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟಿ ರನ್ಯಾ ರಾವ್ ಸಲ್ಲಿಸಿದ್ದ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸಿಸಿಟಿವಿ ದೃಶ್ಯಾವಳಿ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಿಲೇವಾರಿ ಮಾಡಿದೆ. ಅಗತ್ಯ ವೀಡಿಯೋಗಳನ್ನು ಒದಗಿಸುವುದಾಗಿ ಸಿಐಎಸ್‌ಎಫ್ ನ್ಯಾಯಾಲಯಕ್ಕೆ ಭರವಸೆ ನೀಡಿದ ಹಿನ್ನೆಲೆಯಲ್ಲಿ ಅರ್ಜಿಯನ್ನು ಇತ್ಯರ್ಥಗೊಳಿಸಲಾಗಿದೆ.

ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರ ಏಕಸದಸ್ಯ ಪೀಠದ ಮುಂದೆ ನಡೆದ ವಿಚಾರಣೆಯಲ್ಲಿ, ರನ್ಯಾ ಪರ ವಕೀಲ ವೈ. ಎಲ್. ಮಹೇಶ್, ಹಿಂದಿನ ನ್ಯಾಯಾಲಯದ ಆದೇಶವನ್ನು ಸಿಐಎಸ್‌ಎಫ್ ಸಮರ್ಪಕವಾಗಿ ಪಾಲಿಸಿಲ್ಲ ಎಂದು ವಾದ ಮಂಡಿಸಿದರು.

2025ರ ಮಾರ್ಚ್ 3ರ ಸಿಸಿಟಿವಿ ದೃಶ್ಯಾವಳಿಯನ್ನು ಸ್ಪಷ್ಟ ರೂಪದಲ್ಲಿ ಒದಗಿಸುವಂತೆ ನಿರ್ದೇಶನ ನೀಡಬೇಕೆಂದು ಅವರು ಮನವಿ ಮಾಡಿದರು.

ಸಿಐಎಸ್‌ಎಫ್ ಪರ ಹೆಚ್ಚುವರಿ ಸಾಲಿಸಿಟರ್ ಜನರಲ್ ಅರವಿಂದ್ ಕಾಮತ್, ಆದೇಶವನ್ನು ಅಧಿಕಾರಿಗಳು ತಪ್ಪಾಗಿ ಅರ್ಥೈಸಿಕೊಂಡಿರುವುದಾಗಿ ತಿಳಿಸಿ, ಅರ್ಜಿದಾರರು ಅಧಿಕಾರಿಗಳನ್ನು ಸಂಪರ್ಕಿಸಿದರೆ ಮಾರ್ಚ್ 3ರ ಸಂಜೆ 4.30ರಿಂದ ಮಾರ್ಚ್ 4ರ ಬೆಳಿಗ್ಗೆ 11 ಗಂಟೆಯವರೆಗಿನ ದೃಶ್ಯಾವಳಿಯನ್ನು ನೀಡಲಾಗುವುದು ಎಂದು ತಿಳಿಸಿದರು.

ಈ ಭರವಸೆಯನ್ನು ದಾಖಲಿಸಿಕೊಂಡ ಹೈಕೋರ್ಟ್, ಸಂಬಂಧಿತ ಸಿಸಿಟಿವಿ ದೃಶ್ಯಾವಳಿಯನ್ನು ಒದಗಿಸುವಂತೆ ಸೂಚಿಸಿ ಅರ್ಜಿಯನ್ನು ಮುಕ್ತಾಯಗೊಳಿಸಿತು.

---

## ಎಚ್‌ಐವಿಏಡ್ಸ್ ಅರಿವಿನ ಮಾಸಾಚರಣೆಗೆ ಚಾಲನೆ

# ಯುವಶಕ್ತಿ ಎಚ್ಚೆತ್ತರೆ ದೇಶದ ಭವಿಷ್ಯ ಭದ್ರ




**ವಿಜಯಸಾಕ್ಷಿ ಸುದ್ದಿ, ಗದಗ**

ದುಶ್ಚಟ ಹಾಗೂ ಅಸಮರ್ಪಕ ಜೀವನಶೈಲಿಗೆ ಬಲಿಯಾಗದೆ ಯುವಕರು ತಮ್ಮ ಯೌವನವನ್ನು ಸದುಪಯೋಗಪಡಿಸಿಕೊಂಡು ದೈಹಿಕ, ಮಾನಸಿಕ ಹಾಗೂ ಸಾಮಾಜಿಕ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಆರೋಗ್ಯವಂತ ಯುವಶಕ್ತಿಯೇ ದೇಶದ ಅಭಿವೃದ್ಧಿಯ ಪ್ರಮುಖ ಆಸ್ತಿ ಎಂದು ಡ್ಯಾಪ್ಕೂ ಅಧಿಕಾರಿ ಡಾ. ಅರುಂಧತಿ ಕೆ. ಹೇಳಿದರು.

> ಯುವಕರು ತಮ್ಮ ಜವಾಬ್ದಾರಿ ಅರಿತು ಸದೃಢ ಆರೋಗ್ಯ, ಉತ್ತಮ ಚಿಂತನೆ ಹಾಗೂ ಸಾಮಾಜಿಕ ಬದ್ಧತೆಯನ್ನು ಬೆಳೆಸಿಕೊಂಡರೆ ದೇಶದ ಭವಿಷ್ಯವನ್ನು ಬದಲಿಸುವ ಶಕ್ತಿ ಅವರಲ್ಲಿದೆ.
> – ಡಾ. ಅರುಂಧತಿ ಕೆ., ಡ್ಯಾಪ್ಕೂ ಅಧಿಕಾರಿ

ನರಸಾಪುರದ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ರೆಡ್ ರಿಬ್ಬನ್ ಕಾಲೇಜುಗಳು ಹಾಗೂ ಜಿಲ್ಲೆಯ ಶಿಕ್ಷಣ ಮಹಾವಿದ್ಯಾಲಯಗಳ ಸಹಯೋಗದಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ಯುವ ದಿನಾಚರಣೆ ಹಾಗೂ ತೀವ್ರತರ ಎಚ್‌ಐವಿಏಡ್ಸ್ ಅರಿವಿನ ಮಾಸಾಚರಣೆಯ ಜಿಲ್ಲಾ ಮಟ್ಟದ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಯುವಜನರು ಎಚ್‌ಐವಿಏಡ್ಸ್ ಕುರಿತು ವೈಜ್ಞಾನಿಕ ಹಾಗೂ ಸರಿಯಾದ ಮಾಹಿತಿ ಪಡೆದುಕೊಳ್ಳಬೇಕು. ಸಮಾಜದಲ್ಲಿ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಜತೆಗೆ ಉತ್ತಮ ಸಂಪನ್ಮೂಲ ವ್ಯಕ್ತಿಗಳಾಗಿ ರೂಪುಗೊಳ್ಳಬೇಕು. ಆಧುನಿಕ ತಂತ್ರಜ್ಞಾನಕ್ಕೆ ಅತಿಯಾಗಿ ಮಾರುಹೋಗದೆ ಸಾಮಾಜಿಕ ಮೌಲ್ಯಗಳನ್ನು ಉಳಿಸಿಕೊಂಡು, ತಂದೆತಾಯಿ ಹಾಗೂ ಗುರುಹಿರಿಯರನ್ನು ಗೌರವಿಸುವ ಸಂಸ್ಕಾರ ಬೆಳೆಸಿಕೊಳ್ಳಬೇಕು ಎಂದರು. ದೇಶದ ಒಟ್ಟು ಜನಸಂಖ್ಯೆಯಲ್ಲಿ ಯುವಜನರ ಪಾಲು ಗಣನೀಯವಾಗಿದ್ದು, ದೇಶದ ಭವಿಷ್ಯ ರೂಪಿಸುವಲ್ಲಿ ಅವರ ಪಾತ್ರ ನಿರ್ಣಾಯಕವಾಗಿದೆ. ದುಶ್ಚಟಗಳಿಂದ ದೂರವಿದ್ದು ಶಿಕ್ಷಣ, ಆರೋಗ್ಯ ಹಾಗೂ ಸಾಮಾಜಿಕ ಸೇವೆಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

### ರಕ್ತದಾನಕ್ಕೆ ಯುವಕರು ಮುಂದೆ ಬರಲಿ

ಯುವ ಸಮುದಾಯ ರಕ್ತದಾನಕ್ಕೆ ಮುಂದಾಗಬೇಕು. 18ರಿಂದ 60 ವರ್ಷದೊಳಗಿನ ಅರ್ಹ ಪುರುಷರು ಹಾಗೂ ಮಹಿಳೆಯರು ರಕ್ತದಾನ ಮಾಡಬಹುದು. ಒಂದು ಯೂನಿಟ್ ರಕ್ತ ಮತ್ತೊಬ್ಬರ ಜೀವ ಉಳಿಸಲು ನೆರವಾಗಬಹುದು ಎಂದು ಡಾ. ಅರುಂಧತಿ ಕೆ. ತಿಳಿಸಿದರು. ಕಾಲೇಜಿನ ಪ್ರಾಚಾರ್ಯ ಡಾ. ಶಿವಪ್ಪ ಕುರಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಯುವಕರು ದುಶ್ಚಟಗಳಿಂದ ದೂರವಿದ್ದು ಯೌವನವನ್ನು ಜೋಪಾನವಾಗಿ ಬಳಸಿಕೊಳ್ಳಬೇಕು. ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಂಡು ಇಲಾಖೆಯ ವಿವಿಧ ಸಾಮಾಜಿಕ ಕಾರ್ಯಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಸದೃಢ ಆರೋಗ್ಯ ಹಾಗೂ ಸನ್ನಡತೆ ಕುರಿತು ಪ್ರಮಾಣವಚನ ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರೊ. ಖಲೀಲ ಅಹ್ಮದ್, ಶ್ರೀ ಸಣ್ಣಕ್ಕಿ, ಪ್ರೊ. ಕ್ಯಾರಕೊಪ್ಪ, ಆಪ್ತಸಮಾಲೋಚಕಿ ಚೆನ್ನಮ್ಮ, ಸಂಯೋಜಕ ಮಹೇಶ ಎಸ್.ಎಸ್.ಕೆ. ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿ, ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರೊ. ಮಹಾದೇವ ವಡೇಕಾರ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಪ್ರೊ. ಕವಿತಾ ಜಂಬಗಿ ವಂದಿಸಿದರು.

---

## ಸಾಹಿತ್ಯೋತ್ಸವದಲ್ಲಿ ಸಾಧನೆ ಮದರಸ ವಿದ್ಯಾರ್ಥಿಗಳಿಗೆ ಗೌರವ



**ವಿಜಯಸಾಕ್ಷಿ ಸುದ್ದಿ, ಬಳ್ಳಾರಿ**

ಕರ್ನಾಟಕ ರಾಜ್ಯ ಸುನ್ನಿ ಸ್ಟೂಡೆಂಟ್ ಫೆಡರೇಷನ್ ಬಳ್ಳಾರಿ ಜಿಲ್ಲಾ ಸಮಿತಿ ಆಯೋಜಿಸಿದ್ದ ಜಿಲ್ಲಾಮಟ್ಟದ ಸಾಹಿತ್ಯೋತ್ಸವದ ವಿವಿಧ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆ ಮಾಡಿದ ಖುರ್ರತ್ತುಸ್ಸಾದಾತ್ ಸುನ್ನಿ ಮದರಸ ವಿದ್ಯಾರ್ಥಿಗಳಿಗೆ ಗ್ರಾಮಸ್ಥರಿಂದ ವಿಶೇಷ ಗೌರವ ಸಲ್ಲಿಸಲಾಯಿತು.

ಸಾಹಿತ್ಯೋತ್ಸವದ ಸಬ್‌ಜೂನಿಯರ್, ಜೂನಿಯರ್, ಸೀನಿಯರ್ ಹಾಗೂ ಕ್ಯಾಂಪಸ್ ಜೂನಿಯರ್ ವಿಭಾಗಗಳ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳನ್ನು ಗ್ರಾಮದ ಹಿರಿಯರು ಸನ್ಮಾನಿಸಿ ಅಭಿನಂದಿಸಿದರು.

ಜಿಲ್ಲಾಮಟ್ಟದ ಸ್ಪರ್ಧೆಗಳಲ್ಲಿ ಉತ್ತಮ ಪ್ರದರ್ಶನ ನೀಡಿ ಮುದ್ದಟ್ಟನೂರು ಗ್ರಾಮ ಹಾಗೂ ಖುರ್ರತ್ತುಸ್ಸಾದಾತ್ ಸುನ್ನಿ ಮದರಸಕ್ಕೆ ಕೀರ್ತಿ ತಂದ ಎಲ್ಲ ಪ್ರತಿಭಾವಂತ ವಿದ್ಯಾರ್ಥಿಗಳನ್ನೂ ಇದೇ ಸಂದರ್ಭದಲ್ಲಿ ಗೌರವಿಸಲಾಯಿತು.

ವಿದ್ಯಾರ್ಥಿಗಳ ಸಾಧನೆಗೆ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿ, ಮುಂದಿನ ಹಂತದ ಸ್ಪರ್ಧೆಗಳಲ್ಲೂ ಉತ್ತಮ ಪ್ರದರ್ಶನ ನೀಡಿ ಗ್ರಾಮ ಹಾಗೂ ಮದರಸದ ಹೆಸರನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯುವಂತೆ ಶುಭ ಹಾರೈಸಿದರು.

---

## ಉಡುಪಿ ಶ್ರೀಕೃಷ್ಣನ ದರ್ಶನ ಪಡೆದ ಅಣ್ಣಾಮಲೈ



**ವಿಜಯಸಾಕ್ಷಿ ಸುದ್ದಿ, ಉಡುಪಿ**

ಮಾಜಿ ಐಪಿಎಸ್ ಅಧಿಕಾರಿ ಅಣ್ಣಾಮಲೈ ಉಡುಪಿ ಶ್ರೀಕೃಷ್ಣ ಮಠಕ್ಕೆ ಭೇಟಿ ನೀಡಿ ಶ್ರೀಕೃಷ್ಣ ದೇವರ ದರ್ಶನ ಪಡೆದರು. ಮಠದ ವತಿಯಿಂದ ಪ್ರಸಾದ ಹಾಗೂ ಭಾವಚಿತ್ರ ನೀಡಿ ಗೌರವಿಸಲಾಯಿತಲ್ಲದೆ, ಅವರ ಆಗಮನದ ವೇಳೆ ಅಭಿಮಾನಿಗಳು ಮತ್ತು ಸ್ಥಳೀಯರು ಆತ್ಮೀಯವಾಗಿ ಸ್ವಾಗತಿಸಿದರು.

ಕನಕ ನವಗ್ರಹ ಕಿಂಡಿಯ ಮೂಲಕ ಶ್ರೀಕೃಷ್ಣ ದೇವರ ದರ್ಶನ ಪಡೆದ ಅಣ್ಣಾಮಲೈ ಬಳಿಕ ಮಠದ ಪ್ರಸಾದ ಸ್ವೀಕರಿಸಿದರು. ಮಠದ ಪರವಾಗಿ ಪ್ರಸಾದ ಹಾಗೂ ಶ್ರೀಕೃಷ್ಣ ದೇವರ ಭಾವಚಿತ್ರ ನೀಡಿ ಅವರನ್ನು ಸನ್ಮಾನಿಸಲಾಯಿತು.

ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದ ಅವಧಿಯಿಂದಲೇ ಅಣ್ಣಾಮಲೈ ಅವರಿಗೆ ಈ ಭಾಗದೊಂದಿಗೆ ಆತ್ಮೀಯ ನಂಟಿದ್ದು, ಅವರ ಭೇಟಿಯ ಸುದ್ದಿ ತಿಳಿಯುತ್ತಿದ್ದಂತೆ ಹಲವರು ಮಠಕ್ಕೆ ಆಗಮಿಸಿ ಭೇಟಿಯಾದರು.

ಬಿಜೆಪಿಯಿಂದ ಹೊರಬಂದು ವೀ ದ ಲೀಡರ್ಸ್ ಮೂವ್‌ಮೆಂಟ್' ಆರಂಭಿಸಿದ ಬಳಿಕ ಉಡುಪಿಗೆ ನೀಡಿರುವ ಇದು ಎರಡನೇ ಭೇಟಿಯಾಗಿದ್ದು, ಈ ಹಿಂದೆ ಕೊಲ್ಲೂರು ಮೂಕಾಂಬಿಕಾ ದೇವಸ್ಥಾನಕ್ಕೂ ಭೇಟಿ ನೀಡಿ ದೇವರ ದರ್ಶನ ಪಡೆದಿದ್ದರು.


ಅಣ್ಣಾಮಲೈ ಅವರ ಭೇಟಿ ಉಡುಪಿ ರಾಜಕೀಯ ಹಾಗೂ ಸಾರ್ವಜನಿಕ ವಲಯದಲ್ಲಿ ಗಮನ ಸೆಳೆಯಿತು.

---

# ಮತದಾರರ ಪಟ್ಟಿಯಿಂದ ಪ್ರಕಾಶ್ ರಾಜ್ ಹೆಸರು ಡಿಲೀಟ್: ಸ್ಪಷ್ಟನೆ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕರ್ನಾಟಕದಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿರುವ ಬೆನ್ನಲ್ಲೇ ನಟ ಪ್ರಕಾಶ್ ರಾಜ್ ಅವರ ಹೆಸರು ಮತದಾರರ ಪಟ್ಟಿಯಿಂದ ಕೈಬಿಟ್ಟಿರುವ ವಿಚಾರ ವಿವಾದಕ್ಕೆ ಕಾರಣವಾಗಿದೆ. ತಮ್ಮ ಹೆಸರು ಡಿಲೀಟ್ ಆಗಿರುವುದನ್ನು ಪ್ರಶ್ನಿಸಿ ಪ್ರಕಾಶ್ ರಾಜ್ ವಿಡಿಯೋ ಮೂಲಕ ಆಕ್ಷೇಪ ವ್ಯಕ್ತಪಡಿಸಿದ ಬೆನ್ನಲ್ಲೇ, ಚುನಾವಣಾ ಆಯೋಗದ ಅಧಿಕಾರಿಗಳು ಈ ಕುರಿತು ಸ್ಪಷ್ಟನೆ ನೀಡಿದ್ದಾರೆ. ರಾಜ್ಯಾದ್ಯಂತ ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿದ್ದು, ಅಕ್ರಮ ಹಾಗೂ ಗೊಂದಲಭರಿತ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗುತ್ತಿದೆ. ಬೆಂಗಳೂರಿನಲ್ಲಿ ಸುಮಾರು 65 ಲಕ್ಷ ಮತದಾರರ ಹೆಸರು ಪಟ್ಟಿಯಿಂದ ಡಿಲೀಟ್ ಆಗಿರುವ ಮಾಹಿತಿ ಇದೆ. ಆಗಸ್ಟ್ 11ರಂದು ವಿಡಿಯೋ ಹಂಚಿಕೊಂಡಿದ್ದ ಪ್ರಕಾಶ್ ರಾಜ್, ತಾವು ಹುಟ್ಟಿ ಬೆಳೆದ, ಶಿಕ್ಷಣ ಪಡೆದ ಹಾಗೂ ಈ ಹಿಂದೆ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿದ್ದ ಕ್ಷೇತ್ರದಲ್ಲೇ ತಮ್ಮ ಹೆಸರು ಮತದಾರರ ಪಟ್ಟಿಯಿಂದ ಹೇಗೆ ಡಿಲೀಟ್ ಆಗಲು ಸಾಧ್ಯ ಎಂದು ಪ್ರಶ್ನಿಸಿದ್ದರು. ಈ ಬೆಳವಣಿಗೆಯನ್ನು ಒಂದು ಜೋಕ್' ಎಂದು ವ್ಯಂಗ್ಯವಾಡಿದ್ದ ಅವರು, ತಮ್ಮ ಮತದಾನದ ಹಕ್ಕನ್ನು ಮರಳಿ ಪಡೆಯಲು ಅಗತ್ಯವಿರುವ ಎಲ್ಲ ಕಾನೂನು ಕ್ರಮಗಳನ್ನು ಕೈಗೊಳ್ಳುವುದಾಗಿ ಹೇಳಿದ್ದರು.



ಪ್ರಕಾಶ್ ರಾಜ್ ಅವರ ಆರೋಪಕ್ಕೆ ಪ್ರತಿಕ್ರಿಯಿಸಿರುವ ಚುನಾವಣಾಧಿಕಾರಿಗಳು, ಅವರು ಶಾಂತಿನಗರದ ಮತದಾರರಾಗಿದ್ದರು. ಆದರೆ ಖಿಖ ಪ್ರಕ್ರಿಯೆಯಡಿ ನಡೆದ ಮನೆ-ಮನೆ ಪರಿಶೀಲನೆ ವೇಳೆ ಅವರು ತಮ್ಮ ನೋಂದಾಯಿತ ನಿವಾಸವಾದ ನಂಬರ್ 266, ಗಾರ್ಡನ್ ಅಪಾರ್ಟ್‌ಮೆಂಟ್‌ನಿಂದ ಸ್ಥಳಾಂತರಗೊಂಡಿರುವುದು ಪತ್ತೆಯಾಗಿದೆ ಎಂದು ತಿಳಿಸಿದ್ದಾರೆ.

ಸ್ಥಳೀಯವಾಗಿ ಬೂತ್ ಮಟ್ಟದ ಅಧಿಕಾರಿ ವಿಚಾರಣೆ ನಡೆಸಿದಾಗ, ಪ್ರಕಾಶ್ ರಾಜ್ ಅವರು ಕಳೆದ ನಾಲ್ಕು ವರ್ಷಗಳಿಂದ ಆ ನಿವಾಸದಲ್ಲಿ ವಾಸಿಸುತ್ತಿಲ್ಲ. ಬದಲಾಗಿ ಅಲ್ಲಿ ಬಾಡಿಗೆದಾರರು ವಾಸಿಸುತ್ತಿದ್ದಾರೆ ಎಂಬ ಮಾಹಿತಿ ದೊರೆತಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಆಔಣ ನೀಡಿದ ಮಾಹಿತಿಯ ಆಧಾರದ ಮೇಲೆ ಸ್ಥಳ ಪರಿಶೀಲನೆ ನಡೆಸಲಾಗಿದ್ದು, ನಿಗದಿತ ವಿಳಾಸದಲ್ಲಿ ಪ್ರಕಾಶ್ ರಾಜ್ ಅವರು ದೀರ್ಘಕಾಲದಿಂದ ವಾಸಿಸುತ್ತಿಲ್ಲ ಎಂಬ ಕಾರಣಕ್ಕೆ ಅವರ ಹೆಸರನ್ನು ಶಾಶ್ವತವಾಗಿ ಸ್ಥಳಾಂತರಗೊಂಡ ಮತದಾರರ ಪಟ್ಟಿಗೆ ಸೇರಿಸಲಾಗಿದೆ ಎಂದು ಚುನಾವಣಾಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಈ ಕುರಿತು ಪ್ರಕಾಶ್ ರಾಜ್ ಅವರೊಂದಿಗೆ ದೂರವಾಣಿ ಮೂಲಕವೂ ಮಾತನಾಡಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ಈ ವೇಳೆ ತಾವು ಶಾಂತಿನಗರದಲ್ಲೇ ಬೇರೆ ಸ್ಥಳದಲ್ಲಿ ವಾಸಿಸುತ್ತಿರುವುದಾಗಿ ಪ್ರಕಾಶ್ ರಾಜ್ ತಿಳಿಸಿದ್ದಾರೆ ಎನ್ನಲಾಗಿದೆ.

ಹೀಗಾಗಿ, ಅವರು ಸ್ಥಳೀಯ ಆಔಣ ಅವರನ್ನು ಸಂಪರ್ಕಿಸಿ ಫಾರ್ಮ್-6 ಸಲ್ಲಿಸಿದರೆ ಶಾಂತಿನಗರದ ಮತದಾರರ ಪಟ್ಟಿಯಲ್ಲಿ ಮತ್ತೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು ಎಂದು ಚುನಾವಣಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

ತಮ್ಮ ಹೆಸರು ಮತದಾರರ ಪಟ್ಟಿಯಿಂದ ಕೈಬಿಟ್ಟಿರುವ ಕುರಿತು ವಿಡಿಯೋ ಹಂಚಿಕೊಂಡಿದ್ದ ಪ್ರಕಾಶ್ ರಾಜ್, ತಮಗೆ ಮತ ಹಾಕದವರಿಗೆ ಮತದಾನದ ಹಕ್ಕಿನಿಂದಲೇ ವಂಚಿಸಲಾಗುತ್ತಿದೆ ಎಂದು ಆರೋಪಿಸಿದ್ದರು.

ಇದೀಗ ಚುನಾವಣಾಧಿಕಾರಿಗಳ ಸ್ಪಷ್ಟನೆಯೊಂದಿಗೆ ಪ್ರಕಾಶ್ ರಾಜ್ ಅವರ ಹೆಸರು ಪಟ್ಟಿಯಿಂದ ಕೈಬಿಟ್ಟಿರುವುದರ ಹಿಂದಿನ ಕಾರಣದ ಬಗ್ಗೆ ಉಂಟಾಗಿದ್ದ ಗೊಂದಲಕ್ಕೆ ತೆರೆ ಬಿದ್ದಿದೆ.

---

## ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

202627ನೇ ಶೈಕ್ಷಣಿಕ ಸಾಲಿನ ಪ್ರಧಾನಮಂತ್ರಿ ವಿದ್ಯಾರ್ಥಿವೇತನ ಯೋಜನೆ ಅಡಿಯಲ್ಲಿ ಮಾಜಿ ಸೈನಿಕರ ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ, ಭಾರತೀಯ ವೈದ್ಯಕೀಯ ಮಂಡಳಿ, ಯುಜಿಸಿ ಸೇರಿದಂತೆ ಅಧಿಕೃತ ಸಂಸ್ಥೆಗಳಿಂದ ಮಾನ್ಯತೆ ಪಡೆದ ಮೊದಲ ವೃತ್ತಿಪರ ಪದವಿ ಕೋರ್ಸ್ ಮೊದಲನೇ ವರ್ಷಕ್ಕೆ 202627ನೇ ಸಾಲಿನಲ್ಲಿ ಪ್ರವೇಶ ಪಡೆದಿರುವ ಮಾಜಿ ಸೈನಿಕರ ಮಕ್ಕಳು ಅರ್ಜಿ ಸಲ್ಲಿಸಬಹುದು. ಅರ್ಹ ವಿದ್ಯಾರ್ಥಿಗಳು ಡಿ.31ರೊಳಗಾಗಿ ಸೈನಿಕ ಕಲ್ಯಾಣ ಮಂಡಳಿಯ ಅಧಿಕೃತ ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# ಭುಜದ ಗಾಯಕ್ಕೆ ಶಸ್ತ್ರಚಿಕಿತ್ಸೆ; ಜೂನಿಯರ್ ಎನ್‌ಟಿಆರ್‌ಗೆ ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ, ಚಿತ್ರೀಕರಣಕ್ಕೆ ತಾತ್ಕಾಲಿಕ ಬ್ರೇಕ್



**ವಿಜಯಸಾಕ್ಷಿ ಸುದ್ದಿ, ಹೈದರಾಬಾದ್**

ಭುಜದ ಗಾಯದಿಂದ ಬಳಲುತ್ತಿದ್ದ ಟಾಲಿವುಡ್ ಸ್ಟಾರ್ ಜೂನಿಯರ್ ಎನ್‌ಟಿಆರ್ ಅವರಿಗೆ ಇಂದು (ಆಗಸ್ಟ್ 12) ಹೈದರಾಬಾದ್‌ನ ಕಿಮ್ಸ್ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆ ನಡೆಯಲಿದೆ. ವೈದ್ಯಕೀಯ ಪರೀಕ್ಷೆಯ ಬಳಿಕ ಚಿಕಿತ್ಸೆ ಅಗತ್ಯವೆಂದು ವೈದ್ಯರು ಸೂಚಿಸಿದ್ದು, ಈ ಕುರಿತು ಎನ್‌ಟಿಆರ್ ತಂಡ ಅಧಿಕೃತ ಪ್ರಕಟಣೆ ಹೊರಡಿಸಿದೆ. ವೈದ್ಯರ ಸಲಹೆಯಂತೆ ಎನ್‌ಟಿಆರ್ ಅವರ ಭುಜದ ಶಸ್ತ್ರಚಿಕಿತ್ಸೆ ನಿಗದಿಯಾಗಿದ್ದು, ಚಿಕಿತ್ಸೆ ಬಳಿಕ ಅವರ ಆರೋಗ್ಯದ ಮೇಲೆ ತಜ್ಞ ವೈದ್ಯರ ತಂಡ ನಿರಂತರ ನಿಗಾ ವಹಿಸಲಿದೆ. ಎನ್‌ಟಿಆರ್ ಅವರು ಶೀಘ್ರವಾಗಿ ಗುಣಮುಖರಾಗಲು ವೈದ್ಯರು ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದ್ದಾರೆ. ಶಸ್ತ್ರಚಿಕಿತ್ಸೆಯ ನಂತರ ಅವರ ಆರೋಗ್ಯದ ಬಗ್ಗೆ ಹೆಚ್ಚಿನ ಮಾಹಿತಿ ನೀಡಲಾಗುವುದು. ಅಭಿಮಾನಿಗಳ ಪ್ರೀತಿ ಹಾಗೂ ಬೆಂಬಲಕ್ಕೆ ಧನ್ಯವಾದಗಳು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಇದೇ ವೇಳೆ, ಚೇತರಿಕೆಯ ಅವಧಿಯಲ್ಲಿ ಎನ್‌ಟಿಆರ್ ಅವರ ಖಾಸಗಿತನವನ್ನು ಗೌರವಿಸುವಂತೆ ಅಭಿಮಾನಿಗಳು ಮತ್ತು ಮಾಧ್ಯಮಗಳಿಗೆ ತಂಡ ಮನವಿ ಮಾಡಿದೆ.

ಸದ್ಯ ಜೂನಿಯರ್ ಎನ್‌ಟಿಆರ್ ಪ್ರಶಾಂತ್ ನೀಲ್ ನಿರ್ದೇಶನದ ಹೊಸ ಸಿನಿಮಾ ಹಾಗೂ ದೇವರ: ಪಾರ್ಟ್ 2' ಚಿತ್ರೀಕರಣದಲ್ಲಿ ನಿರತರಾಗಿದ್ದಾರೆ. ಆದರೆ ಶಸ್ತ್ರಚಿಕಿತ್ಸೆಯ ಕಾರಣದಿಂದ ಕೆಲವು ದಿನಗಳ ಕಾಲ ಶೂಟಿಂಗ್‌ಗೆ ವಿರಾಮ ನೀಡಲಾಗುವ ಸಾಧ್ಯತೆ ಇದೆ.

# ವಿಕಲಚೇತನರ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ವಿಕಲಚೇತನರ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಗದಗ ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿ ಹಾಗೂ ಪುರಸಭೆ ವ್ಯಾಪ್ತಿಯಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತ (ವಿ.ಆರ್.ಡಬ್ಲ್ಯು.) ಹುದ್ದೆಗಳಿಗೆ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಗದಗ ಜಿಲ್ಲೆಯ ಶಿರಹಟ್ಟಿ, ಮುಂಡರಗಿ, ರೋಣ ಹಾಗೂ ಗಜೇಂದ್ರಗಡ ತಾಲೂಕುಗಳ ವ್ಯಾಪ್ತಿಯಲ್ಲಿ ಈ ಹುದ್ದೆಗಳು ಖಾಲಿ ಇದ್ದು, ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 10, 2026 ಕೊನೆಯ ದಿನವಾಗಿದೆ. ಶಿರಹಟ್ಟಿ ತಾಲೂಕಿನ ಮಜ್ಜೂರು ಹಾಗೂ ಹೆಬ್ಬಾಳ ಗ್ರಾಮ ಪಂಚಾಯಿತಿಗಳು, ಮುಂಡರಗಿ ತಾಲೂಕಿನ ಮುರಡಿ ಗ್ರಾಮ ಪಂಚಾಯಿತಿ ಹಾಗೂ ಪುರಸಭೆ ಮುಂಡರಗಿ, ರೋಣ ತಾಲೂಕಿನ ಅಸೂಟಿ ಹಾಗೂ ಕುರಹಟ್ಟಿ ಗ್ರಾಮ ಪಂಚಾಯಿತಿಗಳು ಮತ್ತು ಪುರಸಭೆ ರೋಣ, ಗಜೇಂದ್ರಗಡ ತಾಲೂಕಿನ ಶಾಂತಗೇರಿ ಹಾಗೂ ರಾಂಪುರ ಗ್ರಾಮ ಪಂಚಾಯಿತಿಗಳಲ್ಲಿ ವಿ.ಆರ್.ಡಬ್ಲ್ಯು. ಹುದ್ದೆಗಳು ಖಾಲಿ ಇವೆ.

ಸಂಬಂಧಪಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ 18ರಿಂದ 45 ವರ್ಷದೊಳಗಿನ, ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರುವ ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರುವ ವಿಕಲಚೇತನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ವಿಕಲಚೇತನರ ಪುನರ್ವಸತಿಗೆ ಸಂಬಂಧಿಸಿದ ವಿಶೇಷ ಶಿಕ್ಷಣ, ಆರ್‌ಸಿಐ ತರಬೇತಿ, ದಿವ್ಯಾಂಗ ಮಿತ್ರ ತರಬೇತಿ, ಸನ್ನೆ ಭಾಷೆ ತರಬೇತಿ, ದೈಹಿಕ ವ್ಯಾಯಾಮ ತರಬೇತಿ ಸೇರಿದಂತೆ ಸಂಬಂಧಿತ ವಿಶೇಷ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು.

ಭಾಗಶಃ ಅಂಧರು, ಭಾಗಶಃ ಶ್ರವಣದೋಷವುಳ್ಳವರು ಹಾಗೂ ದೈಹಿಕ ಅಂಗವಿಕಲ ನಿರುದ್ಯೋಗಿ ಅರ್ಹ ವಿಕಲಚೇತನ ಯುವಕಯುವತಿಯರನ್ನು ಇಲಾಖೆಯ ಗೌರವಧನದ ಆಧಾರದ ಮೇಲೆ ತಾತ್ಕಾಲಿಕ ಅವಧಿಗೆ ಆಯ್ಕೆ ಮಾಡಲಾಗುವುದು.

ಆಸಕ್ತ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾಡಳಿತ ಭವನ, ಗದಗ, ಕೊಠಡಿ ಸಂಖ್ಯೆ 29ಕ್ಕೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ 08372220419ಕ್ಕೆ ಸಂಪರ್ಕಿಸಬಹುದು ಎಂದು ಇಲಾಖೆಯ ಪ್ರಕಟಣೆ ತಿಳಿಸಿದೆ.

# ಬೆಳೆ ವಿಮೆಗೆ ರೈತರು ಇಂದೇ ನೋಂದಾಯಿಸಿಕೊಳ್ಳಿ

**ವಿಜಯಸಾಕ್ಷಿ ಸುದ್ದಿ, ಗದಗ**

202627ನೇ ಸಾಲಿನ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ಅಧಿಸೂಚಿತ ಬೆಳೆಗಳಿಗೆ ಬೆಳೆ ವಿಮೆ ಮಾಡಿಸಲು ರೈತರಿಗೆ ಕೃಷಿ ಇಲಾಖೆ ಸಲಹೆ ನೀಡಿದೆ.

ಅಧಿಸೂಚಿತ ಬೆಳೆಗಳಿಗೆ ಬೆಳೆ ಸಾಲ ಪಡೆದಿರುವ ರೈತರಿಗೆ ಬೆಳೆ ವಿಮೆ ಯೋಜನೆ ಕಡ್ಡಾಯವಾಗಿದ್ದು, ಬೆಳೆ ಸಾಲ ಪಡೆಯದ ರೈತರಿಗೆ ಯೋಜನೆ ಐಚ್ಛಿಕವಾಗಿದೆ. ಪ್ರಸಕ್ತ ಸಾಲಿನಲ್ಲಿ ಗದಗ ಜಿಲ್ಲೆಗೆ ಇಂಡಸ್ ಇಂಡ್ ಜನರಲ್ ಇನ್ಶ್ಯೂರೆನ್ಸ್ ಕಂಪನಿ ಅನುಷ್ಠಾನ ವಿಮಾ ಸಂಸ್ಥೆಯಾಗಿ ಆಯ್ಕೆಯಾಗಿದೆ.

ಆ.14ರೊಳಗೆ ವಿಮೆ ಮಾಡಿಸಿ: ಬಜಿಲ್ಲೆಯಲ್ಲಿ ಸೂರ್ಯಕಾಂತಿ (ಮಳೆ ಆಶ್ರಿತ ಹಾಗೂ ನೀರಾವರಿ), ಕೆಂಪು ಮೆಣಸಿನಕಾಯಿ (ಮಳೆ ಆಶ್ರಿತ) ಮತ್ತು ಈರುಳ್ಳಿ (ಮಳೆ ಆಶ್ರಿತ) ಬೆಳೆಗಳಿಗೆ ಬೆಳೆ ವಿಮೆ ಕಂತು ಪಾವತಿಸಿ ನೋಂದಾಯಿಸಿಕೊಳ್ಳಲು ಆಗಸ್ಟ್ 14, 2026 ಕೊನೆಯ ದಿನವಾಗಿದೆ.

ರೈತರು ಕೊನೆಯ ದಿನದವರೆಗೆ ಕಾಯದೆ ಮುಂಚಿತವಾಗಿಯೇ ಬೆಳೆ ವಿಮೆ ಯೋಜನೆಯಡಿ ನೋಂದಾಯಿಸಿಕೊಳ್ಳಬೇಕು. ಬೆಳೆ ವಿಮೆ ಮಾಡಿಸುವ ಮೂಲಕ ಮುಂಗಾರು ಹಂಗಾಮಿನಲ್ಲಿ ಸಂಭವಿಸಬಹುದಾದ ಬೆಳೆ ನಷ್ಟದಿಂದ ಆರ್ಥಿಕ ರಕ್ಷಣೆ ಪಡೆಯುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 2810ನೇ ಶಿವಾನುಭವದಲ್ಲಿ ಗುರುಸೇವೆಯ ಸ್ಮರಣೆ | ಸಾಧನೆ ಮಾಡಿದ ಹಾಗೂ ತೆರೆಮರೆಯಲ್ಲಿದ್ದ ಪ್ರತಿಭಾವಂತರನ್ನು ಸಮಾಜಕ್ಕೆ ಪರಿಚಯಿಸುವ ಕಾರ್ಯ

# ಶಿವಾನುಭವದ ಬೆಳಕಿನಲ್ಲಿ ಸಿದ್ಧಲಿಂಗ ಶ್ರೀಗಳ ನೆನಪು

**ವಿಜಯಸಾಕ್ಷಿ ಸುದ್ದಿ, ಗದಗ**

ಶಿವ ಎಂದರೆ ಕೇವಲ ದೇವರ ಅಸ್ತಿತ್ವದ ಪ್ರಶ್ನೆಯಲ್ಲ. ಅದು ಮಂಗಳ ಸ್ವರೂಪವಾಗಿದ್ದು, ಸರ್ವರನ್ನು ಸಮಭಾವದಿಂದ ಕಾಣುವ ಸತ್‌ಚಿತ್‌ಆನಂದದ ಮೂಲ ಸ್ವರೂಪವಾಗಿದೆ. ಶಿವಾನುಭವ ಎಂದರೆ ಸತ್ಯ, ಸೌಂದರ್ಯ ಹಾಗೂ ಪ್ರಾಮಾಣಿಕತೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮೀಜಿ ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ ವತಿಯಿಂದ ನಡೆದ 2810ನೇ ಶಿವಾನುಭವದ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು. 54 ವರ್ಷಗಳ ಹಿಂದೆ ತೋಂಟದಾರ್ಯ ಮಠದಲ್ಲಿ ಸಮಾನ ಮನಸ್ಕ ಯುವಕರು ಆರಂಭಿಸಿದ ಶಿವಾನುಭವ, ಲಿಂಗಾಯತ ಪ್ರಗತಿಶೀಲ ಸಂಘದ ಆಶ್ರಯದಲ್ಲಿ ಪ್ರತಿ ಸೋಮವಾರ ನಿರಂತರವಾಗಿ ನಡೆಯುತ್ತ ಬಂದಿದೆ. ನಾಡಿನ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಾಗೂ ತೆರೆಮರೆಯಲ್ಲಿದ್ದ ಪ್ರತಿಭಾವಂತರನ್ನು ಸಮಾಜಕ್ಕೆ ಪರಿಚಯಿಸುವ ಕಾರ್ಯವನ್ನು ಶಿವಾನುಭವ ಮಾಡಿದೆ ಎಂದರು.

ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ತೋಂಟದಾರ್ಯ ಮಠದ ಪಟ್ಟಾಧಿಕಾರ ವಹಿಸಿಕೊಂಡ ಬಳಿಕ ಭಕ್ತರಲ್ಲಿ ನಮ್ಮ ಮಠ ಎಂಬ ಭಾವನೆ ಮೂಡಿಸಿ, ಶ್ರೀಮಠವನ್ನು ಸರ್ವಜನಾಂಗದ ಶಾಂತಿಯ ತೋಟವನ್ನಾಗಿ ರೂಪಿಸಿದರು ಎಂದು ಸ್ಮರಿಸಿದರು.



ನಿವೃತ್ತ ಡಾ. ಅರ್ಜುನ ಗೋಳಸಂಗಿ ಅವರನ್ನು ಕೆಸರಿನಲ್ಲಿ ಅರಳಿದ ಕಮಲ' ಎಂದು ಬಣ್ಣಿಸಿದ ಶ್ರೀಗಳು, ಸಾಹಿತ್ಯ, ಸಂಸ್ಕೃತಿ, ಸಂಘಟನೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅವರು ಸಲ್ಲಿಸಿರುವ ಸೇವೆ ಶ್ಲಾಘನೀಯ. ಅವರ ನಿವೃತ್ತ ಜೀವನ ಸುಖಸಂತೋಷದಿಂದ ಕೂಡಿರಲಿ ಎಂದು ಹಾರೈಸಿದರು.

**ಸಿದ್ಧಲಿಂಗ ಶ್ರೀಗಳ ಪ್ರಗತಿಪರ ಚಿಂತನೆ ಸ್ಮರಣೆ**

ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಪಟ್ಟಾಧಿಕಾರ ಹಾಗೂ ಲಿಂಗಾಯತ ಪ್ರಗತಿಶೀಲ ಸಂಘ ಸ್ಥಾಪನೆ, ನೆನಪು' ವಿಷಯ ಕುರಿತು ಉಪನ್ಯಾಸ ನೀಡಿದ ಅಣ್ಣಿಗೇರಿಯ ನಿಂಗಮ್ಮ ಹೂಗಾರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಪ್ರೊ. ಎಸ್. ಹರ್ಲಾಪುರ, ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಪ್ರಗತಿಪರ ಚಿಂತನೆ ಹಾಗೂ ಜೀವಪರ ಕಾಳಜಿ ಹೊಂದಿದ್ದರು.

ಎಲ್ಲರನ್ನೂ ತಮ್ಮವರೆಂಬ ಭಾವದಿಂದ ಅಪ್ಪಿಕೊಂಡು ಶ್ರೀಮಠದಲ್ಲಿ ಶಾಂತಿ ಹಾಗೂ ಸೌಹಾರ್ದತೆಯನ್ನು ಬೆಳೆಸಿದರು ಎಂದು ಹೇಳಿದರು. ಗೌರವ ಅತಿಥಿ ಸಿದ್ದರಾಮಯ್ಯ ಪಂಚಾಕ್ಷರಯ್ಯ ಸಂಶಿಮಠ ಅವರು ತಮ್ಮ ತಂದೆ ಪಂಚಾಕ್ಷರಯ್ಯ ಸಂಶಿಮಠ ಹಾಗೂ ಶ್ರೀಮಠದ ಅವಿನಾಭಾವ ಸಂಬಂಧವನ್ನು ಸ್ಮರಿಸಿದರು. ನಿರಂಜನ ಬುಳ್ಳಾ, ನಮಗಿರುವುದು ಒಂದೇ ಮಠ, ಅದು ತೋಂಟದಾರ್ಯ ಮಠ, ನಮಗಿರುವವರು ಒಬ್ಬರೇ ಸ್ವಾಮೀಜಿ, ಅವರೇ ತೋಂಟದ ಸಿದ್ಧರಾಮ ಸ್ವಾಮೀಜಿ ಎಂದರು.

ಪ್ರಭುದೇವ ಹಿರೇಮಠ ಅವರು ಅಂದಿನ ಐತಿಹಾಸಿಕ ಘಟನೆಗಳನ್ನು ಸ್ಮರಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ಅರ್ಜುನ ಗೋಳಸಂಗಿ, ಗದಗ ಪರಿಸರಕ್ಕೆ ಬರಲು ಹುಲಕೋಟಿಯ ಹಿರಿಯರಾದ ಎಚ್.ಕೆ. ಪಾಟೀಲ, ಡಿ.ಆರ್. ಪಾಟೀಲ ಹಾಗೂ ಧತ್ತಪ್ಪಗೌಡ ಒದುಗೌಡ ಅವರೇ ಕಾರಣ ಎಂದರು. ಶ್ರೀಮಠದ ಒಡನಾಟದಿಂದ ತಮ್ಮ ವಿಚಾರಧಾರೆಯಲ್ಲಿ ಅಪಾರ ಬದಲಾವಣೆಯಾಗಿದೆ. ಶ್ರೀಮಠಕ್ಕೆ ತಾವು ಋಣಿಯಾಗಿದ್ದು, ಮುಂದೆಯೂ ಪ್ರತಿಯೊಂದು ಕಾರ್ಯದಲ್ಲಿ ಭಾಗಿಯಾಗುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ವಚನ ಸಂಗೀತ, ಧರ್ಮಗ್ರಂಥ ಪಠಣ, ವಚನ ಚಿಂತನ ಹಾಗೂ ದಾಸೋಹ ಸೇವೆ ನಡೆಯಿತು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ. ಉಮೇಶ ವಿ. ಪುರದ ಸ್ವಾಗತಿಸಿದರು. ಶಿವಾನುಭವ ಸಮಿತಿ ಚೇರ್ಮನ್ ಡಾ. ರಮೇಶ ಮ. ಕಲ್ಲನಗೌಡರ ಕಾರ್ಯಕ್ರಮ ನಿರ್ವಹಿಸಿದರು.

ಶಿವಾನುಭವದಲ್ಲಿ ಉಪಾಧ್ಯಕ್ಷ ಪ್ರಭು ಗಂಜಿಹಾಳ, ಸುರೇಖಾ ಪಿಳ್ಳಿ, ಕಾರ್ಯದರ್ಶಿ ಸಿದ್ದರಾಮ ಪಟ್ಟೇದ, ಸಹಕಾರ್ಯದರ್ಶಿ ಪ್ರತಿಭಾ ಬಡ್ನಿ, ಕೋಶಾಧ್ಯಕ್ಷ ವೀರಣ್ಣ ಗೋಟಡಕಿ, ಕೆ.ಎಸ್. ಕೋರಿಮಠ, ಸೋಮಶೇಖರ ಪುರಾಣಿಮಠ, ಆದೇಶ ಅಂಗಡಿ ಸೇರಿದಂತೆ ಶ್ರೀಮಠದ ಸದ್ಭಕ್ತರು

> ಶಿವಾನುಭವ ಎಂದರೆ ಸತ್ಯ, ಸೌಂದರ್ಯ ಹಾಗೂ ಪ್ರಾಮಾಣಿಕತೆಯ ಅನುಭವ. 54 ವರ್ಷಗಳಿಂದ ನಿರಂತರವಾಗಿ ನಡೆಯುತ್ತಿರುವ ಶಿವಾನುಭವವು ಸಾಧಕರು ಹಾಗೂ ತೆರೆಮರೆಯಲ್ಲಿರುವ ಪ್ರತಿಭೆಗಳನ್ನು ಸಮಾಜಕ್ಕೆ ಪರಿಚಯಿಸುವ ಮಹತ್ವದ ವೇದಿಕೆಯಾಗಿದೆ. ಸಿದ್ಧಲಿಂಗ ಮಹಾಸ್ವಾಮಿಗಳ ಪ್ರಗತಿಪರ ಹಾಗೂ ಸಮಾಜಮುಖಿ ಚಿಂತನೆಗಳು ಸದಾ ಸ್ಮರಣೀಯ.
> – ಡಾ. ತೋಂಟದ ಸಿದ್ಧರಾಮ ಮಹಾಸ್ವಾಮೀಜಿ

# ಪಾದಯಾತ್ರೆ ತಡೆದ ಕ್ರಮ ಹೇಡಿತನದ ಕೃತ್ಯ

**ವಿಜಯಸಾಕ್ಷಿ ಸುದ್ದಿ, ಗದಗ**



ಬಿನವ್ವ ಭೂಮಿನವ್ವ ಹಕ್ಕುಬಿ ಘೋಷಣೆಯೊಂದಿಗೆ ಜೆಡಿಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಶಾಂತಿಯುತವಾಗಿ ನಡೆಯುತ್ತಿದ್ದ ಪಾದಯಾತ್ರೆಯನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಬಲವಂತವಾಗಿ ತಡೆದಿರುವುದು ಹೇಡಿತನದ ಕೃತ್ಯ ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ಆರೋಪಿಸಿದ್ದಾರೆ.

ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರೈತ ವಿರೋಧಿ ನಿಲುವು ತಾಳಿದ ಸರ್ಕಾರಗಳು ಈ ಹಿಂದೆ ಪತನಗೊಂಡಿರುವುದನ್ನು ಮುಖ್ಯಮಂತ್ರಿ ಅರ್ಥಮಾಡಿಕೊಳ್ಳಬೇಕು. ಪಾದಯಾತ್ರೆಯಲ್ಲಿ ಭಾಗವಹಿಸಿದ್ದ ಸಾವಿರಾರು ರೈತರು ತಾಳ್ಮೆ ಕಳೆದುಕೊಳ್ಳದಂತೆ ನಿಖಿಲ್ ಕುಮಾರಸ್ವಾಮಿ ಮನವಿ ಮಾಡಿದ್ದು, ರೈತರು ಪೊಲೀಸರ ಕ್ರಮವನ್ನು ಸಹಿಸಿಕೊಂಡು ಶಾಂತವಾಗಿದ್ದರು ಎಂದಿದ್ದಾರೆ.

ಸಾವಿರಾರು ರೈತರನ್ನು ನಿಯಂತ್ರಿಸುವ ಸಂದರ್ಭದಲ್ಲಿ ಯುವ ನಾಯಕರಾದ ನಿಖಿಲ್ ಕುಮಾರಸ್ವಾಮಿ, ಶರಣಗೌಡ ಕಂದಕೂರ, ದೊಡ್ಡನಗೌಡ ಪಾಟೀಲ (ನರಿಬೋಳ) ಹಾಗೂ ಕೋರ್ ಕಮಿಟಿ ಅಧ್ಯಕ್ಷ ಜಿ. ಕೃಷ್ಣಾರೆಡ್ಡಿ ಗಾಯಗೊಂಡಿದ್ದಾರೆ ಎಂದು ಗೋವಿಂದಗೌಡ್ರ ತಿಳಿಸಿದ್ದಾರೆ. ಪಾದಯಾತ್ರೆಯನ್ನು ಬಲವಂತವಾಗಿ ತಡೆದಿರುವುದರ ಹಿಂದೆ ಗೊಂದಲ ಸೃಷ್ಟಿಸುವ ಪಿತೂರಿ ಇರಬಹುದೆಂಬ ಅನುಮಾನವಿದೆ ಎಂದು ಅವರು ಆರೋಪಿಸಿದ್ದಾರೆ. ಸರ್ಕಾರದ ದಬ್ಬಾಳಿಕೆ ಹಾಗೂ ಬೆದರಿಕೆಗಳಿಗೆ ಜೆಡಿಎಸ್ ಕಾರ್ಯಕರ್ತರು ಹೆದರುವುದಿಲ್ಲ. ಬಿಡದಿ ಕಾಮಾಕ್ಷಿ ಯೋಜನೆಯನ್ನು ಕೈಬಿಡುವವರೆಗೆ ಹೋರಾಟ ಮುಂದುವರಿಯಲಿದೆ ಎಂದು ಎಚ್ಚರಿಸಿದ್ದಾರೆ.

ಆ.18ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಿಂದ ವಿಧಾನಸೌಧದವರೆಗೆ ಪಾದಯಾತ್ರೆ ನಡೆಸಲಾಗುವುದು ಎಂದು ವೆಂಕನಗೌಡ ಆರ್. ಗೋವಿಂದಗೌಡ್ರ ತಿಳಿಸಿದ್ದಾರೆ.

### ಪಾಲಕರ ಕಷ್ಟ ಅರಿತು ಉತ್ತಮ ಫಲಿತಾಂಶದತ್ತ ಹೆಜ್ಜೆ ಇಡಿ

# ದೃಢ ಸಂಕಲ್ಪ, ಪರಿಶ್ರಮದಿಂದ ಗುರಿ ಸಾಧಿಸಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ದೃಢ ಸಂಕಲ್ಪ ಹಾಗೂ ಪರಿಶ್ರಮವಿದ್ದರೆ ಜೀವನದಲ್ಲಿ ಯಾವುದೇ ಗುರಿಯನ್ನು ಸಾಧಿಸಲು ಸಾಧ್ಯ. ರೈತರು ಹಾಗೂ ಬಡ ಕಾರ್ಮಿಕರ ಕುಟುಂಬಗಳಿಂದ ಬಂದಿರುವ ವಿದ್ಯಾರ್ಥಿಗಳು ಪಾಲಕರ ಕಷ್ಟವನ್ನು ಅರಿತು ಉತ್ತಮವಾಗಿ ವಿದ್ಯಾಭ್ಯಾಸ ಮಾಡಿ ಉನ್ನತ ಗುರಿ ಸಾಧಿಸಬೇಕು ಎಂದು ಹಗರಿಬೊಮ್ಮನಹಳ್ಳಿ ಶಾಸಕ ಕೆ. ನೇಮಿರಾಜ್ ನಾಯ್ಕ ಹೇಳಿದರು.

> ದಾಖಲಾಗಿರುವ ಬಹುತೇಕ ವಿದ್ಯಾರ್ಥಿಗಳು ರೈತರು ಹಾಗೂ ಬಡ ಕಾರ್ಮಿಕರ ಮಕ್ಕಳಾಗಿದ್ದೀರಿ. ಮಳೆ ಇಲ್ಲದೆ ರೈತರು ಕಂಗಾಲಾಗಿದ್ದಾರೆ. ಇಂತಹ ಕಷ್ಟದ ನಡುವೆಯೂ ಪಾಲಕರು ನಿಮ್ಮನ್ನು ಓದಿಸುತ್ತಿದ್ದಾರೆ. ಅವರ ಆಶಯದಂತೆ ಉತ್ತಮ ಫಲಿತಾಂಶ ಪಡೆದು ನಿಮ್ಮ ಗುರಿ ಸಾಧಿಸಬೇಕು.
> – ಕೆ. ನೇಮಿರಾಜ್ ನಾಯ್ಕ, ಶಾಸಕ

ಪಟ್ಟಣದ ಗಂ.ಭೀ. ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ 202627ನೇ ಸಾಲಿನ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಹಾಗೂ ವಿವಿಧ ಘಟಕಗಳ ಉದ್ಘಾಟನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಳೆ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದರೂ, ಮಕ್ಕಳ ಭವಿಷ್ಯ ಉತ್ತಮವಾಗಬೇಕು ಎಂಬ ಆಶಯದಿಂದ ಪಾಲಕರು ಕಷ್ಟಪಟ್ಟು ಶಿಕ್ಷಣ ಕೊಡಿಸುತ್ತಿದ್ದಾರೆ. ಅವರ ನಿರೀಕ್ಷೆಯನ್ನು ಹುಸಿಗೊಳಿಸದೆ ಉತ್ತಮ ಫಲಿತಾಂಶ ಪಡೆದು ಉನ್ನತ ಗುರಿ ಸಾಧಿಸಬೇಕು. ಗುರಿ ಸಾಧನೆಗೆ ದೃಢಸಂಕಲ್ಪವೇ ಪ್ರಮುಖ ಸಾಧನ ಎಂದು ಶಾಸಕರು ಹೇಳಿದರು.

ಅರ್ಥಶಾಸ್ತ್ರ ಉಪನ್ಯಾಸಕ ಎಂ. ಹುಲುಗಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯಲ್ಲಿ ಪಠ್ಯೇತರ ಚಟುವಟಿಕೆಗಳ ಪಾತ್ರ ಮಹತ್ವದ್ದಾಗಿದೆ. ಕಾಲೇಜಿನ ವಿವಿಧ ಘಟಕಗಳು ಉದ್ಘಾಟನೆಯೊಂದಿಗೆ ಮತ್ತಷ್ಟು ಚಟುವಟಿಕೆಯಿಂದ ಕಾರ್ಯನಿರ್ವಹಿಸಲಿವೆ ಎಂದರು.

ಕಳೆದ ಸಾಲಿನಲ್ಲಿ ಕಾಲೇಜು ಉತ್ತಮ ಫಲಿತಾಂಶ ದಾಖಲಿಸಿದ್ದು, 50 ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ವಿವಿಧ ವಿಷಯಗಳಲ್ಲಿ 15 ವಿದ್ಯಾರ್ಥಿಗಳು ಶೇ.100 ಅಂಕ ಗಳಿಸಿ ಪ್ರತಿಭಾ ಪುರಸ್ಕಾರಕ್ಕೆ ಭಾಜನರಾಗಿದ್ದಾರೆ ಎಂದು ತಿಳಿಸಿದರು.

ವಿಶೇಷ ಉಪನ್ಯಾಸ ನೀಡಿದ ಎಸ್.ಯು.ಜೆ.ಎಂ. ಪದವಿಪೂರ್ವ ಕಾಲೇಜು ಹರಪನಹಳ್ಳಿಯ ನಿವೃತ್ತ ಉಪನ್ಯಾಸಕ ಎಂ.ಪಿ.ಎಂ. ದಯಾನಂದ ಸ್ವಾಮಿ, ಭಾರತ ಭವ್ಯ ಸಂಸ್ಕೃತಿಯ ನಾಡಾಗಿದ್ದು, ಗುರು ಪರಂಪರೆಗೆ ವಿಶೇಷ ಸ್ಥಾನವಿದೆ. ಅರಿವಿನೊಂದಿಗೆ ಗುರುವಿನ ಮಾರ್ಗದರ್ಶನ ಪಡೆದು ಶಿಕ್ಷಣವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಹಸಿರೇ ಉಸಿರು, ನೇಚರೇ ನಿಮ್ಮ ಟೀಚರ್' ಎಂಬ ಸಂದೇಶ ನೀಡಿದ ಅವರು, ವಿದ್ಯಾರ್ಥಿಗಳು ಪ್ರಕೃತಿಯನ್ನು ಪ್ರೀತಿಸಿ ತಮಗೆ ನೀಡಿರುವ ಸಸಿಗಳನ್ನು ಬೆಳೆಸುವ ಮೂಲಕ ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಕಳೆದ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾಲೇಜಿನ ಪ್ರಾಂಶುಪಾಲ ಡಾ. ಎಂ.ಕೆ. ದುರುಗಪ್ಪ ಅಧ್ಯಕ್ಷತೆ ವಹಿಸಿದ್ದರು. ಕಾಲೇಜಿನ ಅಜೀವ ಸದಸ್ಯ ಗಂಗಾವತಿ ವಿಜೇತ್, ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ನಾಗರಾಜ ಬ್ಯಾಟಿ, ಸದಸ್ಯರಾದ ಕನ್ನೀಹಳ್ಳಿ ಚಂದ್ರಶೇಖರ, ಬಸವರಾಜ ಬಡಿಗೇರ, ನಾಣ್ಯಾಪುರ ಕೃಷ್ಣಮೂರ್ತಿ, ಕೆ.ಬಿ.ಎಂ. ನಾಗಲಿಂಗಸ್ವಾಮಿ, ಬಿ.ಜಿ.ಹಳ್ಳಿ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರು, ಜಿಲ್ಲಾ ಉಪನ್ಯಾಸಕರ ಸಂಘದ ಅಧ್ಯಕ್ಷ ಗೂಳಪ್ಪ ಹುಲಿಮನಿ, ತಾಲೂಕು ಉಪನ್ಯಾಸಕರ ಸಂಘದ ಅಧ್ಯಕ್ಷ ಎಚ್.ಪಿ. ರಾಥೋಡ್, ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಶಿವಕುಮಾರ್ ಎಸ್. ಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕನ್ನಡ ಉಪನ್ಯಾಸಕಿ ಡಾ. ಉಮಾ ಸ್ವಾಗತಿಸಿದರು. ಕುಮಾರಿ ರಾಧಿಕಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಶಿಕ್ಷಣ ಶಾಸ್ತ್ರ ಉಪನ್ಯಾಸಕಿ ವಿಜಯಲಕ್ಷ್ಮೀ ವಂದಿಸಿದರು.

# ಇಂದಿನಿಂದ ವಚನ ಶ್ರಾವಣ-2026ಕ್ಕೆ ಚಾಲನೆ

**ವಿಜಯಸಾಕ್ಷಿ ಸುದ್ದಿ, ಗದಗ**



ಬಸವದಳ, ಬಸವಕೇಂದ್ರ, ಹಾಗೂ ಲಿಂಗಾಯತ ಪ್ರಗತಿಶೀಲ ಸಂಘ ಗದಗಬೆಟೇರಿ ಇವರ ಸಂಯುಕ್ತಾಶ್ರಯದಲ್ಲಿ ಪ್ರತಿವರ್ಷದಂತೆ ಈ ಬಾರಿಯೂ ವಚನ ಶ್ರಾವಣ-2026' ಕಾರ್ಯಕ್ರಮವನ್ನು ಗದಗಬೆಟಗೇರಿ ನಗರದ ವಿವಿಧ ಬಡಾವಣೆಗಳು ಹಾಗೂ ಗ್ರಾಮಗಳ ಮನೆಮನೆಗಳಲ್ಲಿ ಆಯೋಜಿಸಲಾಗುತ್ತಿದೆ.

ವಚನ ಶ್ರಾವಣ-2026'ರ ಪ್ರಾರಂಭೋತ್ಸವ ಆ.13ರಂದು ಗುರುವಾರ ಸಂಜೆ 5.30ಕ್ಕೆ ಗದಗ ನಗರದ ಸ್ಟೇಷನ್ ರಸ್ತೆಯ ಗದಗ ರೆಸ್ಟೋರೆಂಟ್ ಸಮೀಪದ ಶರಣ ಸುರೇಶ ಬಸವರಾಜ ಅಂಗಡಿ ಅವರ ನಿವಾಸದಲ್ಲಿ ನಡೆಯಲಿದೆ. ಎಡೆಯೂರು ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಪೂಜ್ಯಶ್ರೀ ಮನ್ನಿರಂಜನ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಬಸವದಳ ಗದಗಬೆಟಗೇರಿ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ಅಧ್ಯಕ್ಷತೆ ವಹಿಸುವರು.

ನ್ಯಾಯವಾದಿ ಶರಣ ಎಸ್.ಎಸ್. ಶೆಟ್ಟರ ಉದ್ಘಾಟಿಸಲಿದ್ದು, ಬಸವಕೇಂದ್ರ, ಹಾಗೂ ಜಾಗತಿಕ ಲಿಂಗಾಯತ ಮಹಾಸಭಾ ಗದಗ ಜಿಲ್ಲಾ ಅಧ್ಯಕ್ಷ ಶರಣ ಕೆ.ಎಸ್. ಚೆಟ್ಟಿ ಹಾಗೂ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ. ಉಮೇಶ ಪುರದ ಅತಿಥಿಗಳಾಗಿ ಪಾಲ್ಗೊಳ್ಳುವರು.

ಇದೇ ಸಂದರ್ಭದಲ್ಲಿ ವಚನ ಶ್ರಾವಣ-2026' ಕಿರುಹೊತ್ತಿಗೆ ಬಿಡುಗಡೆ ನಡೆಯಲಿದೆ. ಸಾಹಿತಿ ಹಾಗೂ ಶರಣತತ್ವ ಚಿಂತಕ ಪ್ರೊ. ಚಂದ್ರಶೇಖರ ವಸ್ತದ ಅವರು ವಚನ ಚಿಂತನೆಯನ್ನು ನಡೆಸಿಕೊಡಲಿದ್ದಾರೆ.

ವಚನ ಶ್ರಾವಣದ ಅಂಗವಾಗಿ ನಗರದ ವಿವಿಧ ಬಡಾವಣೆಗಳು ಹಾಗೂ ಗ್ರಾಮಗಳ ಮನೆಮನೆಗಳಲ್ಲಿ ವಚನಗಳ ಚಿಂತನೆ ಮತ್ತು ಶರಣ ತತ್ವದ ಕುರಿತು ಕಾರ್ಯಕ್ರಮಗಳನ್ನು ನಡೆಸಲಾಗುವುದು.

ಬಸವದಳ, ಬಸವಕೇಂದ್ರ, ಹಾಗೂ ಲಿಂಗಾಯತ ಪ್ರಗತಿಶೀಲ ಸಂಘದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಂಘಟಕರ ಪರವಾಗಿ ಪ್ರಕಾಶ ಅಸುಂಡಿ ಮನವಿ ಮಾಡಿದ್ದಾರೆ.

# ಅಬ್ಬಿಗೇರಿಯಲ್ಲಿ ಸಂಗೀತ ಸಂಜೆ; ಮನಸೂರೆಗೊಂಡ ಗಾಯನ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಸಮೀಪದ ಅಬ್ಬಿಗೇರಿ ಗ್ರಾಮದ ಶ್ರೀ ಬೀರಲಿಂಗೇಶ್ವರ ದೇವಸ್ಥಾನದ ಸಭಾಭವನದಲ್ಲಿ ಮಂಗಳವಾರ ಸಂಜೆ ನಾದಸ್ವರ ಸಂಗೀತ ಹಾಗೂ ವಿವಿಧ ಕಲಾಭಿವೃದ್ಧಿ ಸೇವಾ ಸಂಸ್ಥೆ ವತಿಯಿಂದ ಆಯೋಜಿಸಿದ್ದ ಸಂಗೀತ ಸಂಜೆ ಪ್ರೇಕ್ಷಕರ ಮನಸೂರೆಗೊಂಡಿತು. ಡಾ. ವೆಂಕಟೇಶ ಕುಲಕರ್ಣಿ, ಡಿ.ಎಚ್. ಅಣ್ಣಿಗೇರಿ, ಮಾಲತಿ ಕುಲಕರ್ಣಿ ಹಾಗೂ ರಹಮತಬಾನು ಶರಭತವಾಲ ಅವರ ಗಾಯನ ಕಾರ್ಯಕ್ರಮ ಸಂಗೀತಾಸಕ್ತರ ಗಮನ ಸೆಳೆಯಿತು.

ಲಲಿತಾ ರಾಠೋಡ ಅಧ್ಯಕ್ಷತೆ ವಹಿಸಿದ್ದರು. ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಅಂದಪ್ಪ ವೀರಾಪೂರ, ಭೀಮಪ್ಪ ಕಂಬಳಿ, ವಿ.ವಿ. ಅಣ್ಣಿಗೇರಿ, ಸುರೇಶ ಮಲ್ಲಾಪೂರ, ಐ.ಎಚ್. ಶರಭತವಾಲ, ಡಿ.ಎಚ್. ಅಣ್ಣಿಗೇರಿ ಹಾಗೂ ಮಾರುತಿ ದ್ವಾಸಲ ಉಪಸ್ಥಿತರಿದ್ದರು.

# ಧರ್ಮಾಚರಣೆಯಿಂದ ಬದುಕು ಸಾರ್ಥಕ



**ವಿಜಯಸಾಕ್ಷಿ ಸುದ್ದಿ, ಹರಿಹರ**

ಬಹುಜನ್ಮಗಳ ಪುಣ್ಯದ ಫಲವಾಗಿ ಮಾನವ ಜೀವನ ದೊರೆತಿದ್ದು, ಅರಿವು ಹಾಗೂ ಧರ್ಮಾಚರಣೆಯ ಮೂಲಕ ಬದುಕನ್ನು ಸಾರ್ಥಕಪಡಿಸಿಕೊಳ್ಳಬೇಕು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಪೀಠದ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ಹರಿಹರ ತಾಲೂಕಿನ ಹನಗವಾಡಿಯಲ್ಲಿ ಮಂಗಳವಾರ ನಡೆದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು. ಮನುಷ್ಯ ಜೀವನದ ಧರ್ಮ, ಅರ್ಥ, ಕಾಮ ಮತ್ತು ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳಬೇಕು. ಜೀವನದ ಉನ್ನತಿ ಹಾಗೂ ನೆಮ್ಮದಿಯ ಬದುಕಿಗೆ ಧರ್ಮವೇ ಮೂಲವಾಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಅಹಿಂಸೆ, ಸತ್ಯ, ಅಸ್ತೇಯ, ಬ್ರಹ್ಮಚರ್ಯ, ದಯೆ, ಕ್ಷಮೆ, ದಾನ, ಪೂಜೆ, ಜಪ ಮತ್ತು ಧ್ಯಾನ ಸೇರಿದಂತೆ ದಶ ಧರ್ಮಸೂತ್ರಗಳನ್ನು ಬೋಧಿಸಿದ್ದಾರೆ ಎಂದರು. ವಿದ್ಯೆ ಮತ್ತು ಸಂಪತ್ತು ಗಳಿಸುವ ಸಂದರ್ಭದಲ್ಲಿ ಜೀವನ ಶಾಶ್ವತವಲ್ಲ ಎಂಬ ಅರಿವು ಇರಬೇಕು. ಧರ್ಮಾಚರಣೆಯ ಮೂಲಕ ಶಿವಜ್ಞಾನ ಹಾಗೂ ಗುರು ಕಾರುಣ್ಯ ಪಡೆದು ಮಾನವ ಜೀವನವನ್ನು ಸಾರ್ಥಕಪಡಿಸಿಕೊಳ್ಳಬೇಕು ಎಂದು ಜಗದ್ಗುರುಗಳು ಹೇಳಿದರು.

ಸಮಾರಂಭ ಉದ್ಘಾಟಿಸಿ ಮಾತನಾಡಿದ ಹರಿಹರ ಶಾಸಕ ಬಿ.ಪಿ. ಹರೀಶ್, ಬದುಕಿನಲ್ಲಿ ಸತ್ಯ, ಶಾಂತಿ ಹಾಗೂ ಸಮೃದ್ಧಿ ಅಗತ್ಯ. ಪ್ರಕೃತಿ ನಮಗೆ ದೊಡ್ಡ ಕೊಡುಗೆಯನ್ನು ನೀಡಿದೆ. ನಿಸರ್ಗ ಮುನಿದರೆ ಬದುಕೇ ಬರಡಾಗುತ್ತದೆ ಎಂದರು.

ಅನ್ನ ನೀಡುವ ರೈತನ ಬದುಕು ಉಜ್ವಲಗೊಳ್ಳಲು ಶ್ರಮ, ಸಾಧನೆ ಹಾಗೂ ಗುರುಗಳ ಆಶೀರ್ವಾದ ಅಗತ್ಯ. ಭದ್ರಾ ಜಲಾಶಯ ತುಂಬಿ, ವರುಣ ಕೃಪೆ ತೋರಿದರೆ ಈ ಭಾಗದ ರೈತ ಸಮುದಾಯಕ್ಕೆ ಅನುಕೂಲವಾಗಲಿದೆ. ಗುರುಪೀಠದ ಆಶೀರ್ವಾದ ಎಲ್ಲರಿಗೂ ಒಳಿತನ್ನು ತರಲಿ ಎಂದು ಆಶಿಸಿದರು.

ನ್ಯಾಯವಾದಿ ದೊಡ್ಡಮನೆ ಮಂಜುನಾಥ ಪ್ರಾಸ್ತಾವಿಕವಾಗಿ ಮಾತನಾಡಿದರು. ಆವರಗೊಳ್ಳದ ಓಂಕಾರ ಶಿವಾಚಾರ್ಯ ಸ್ವಾಮೀಜಿ ಹಾಗೂ ದುಗ್ಗಲಿಕಡೇನಂದಿಹಳ್ಳಿ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮೀಜಿ ಉಪದೇಶ ನೀಡಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ ಹಾಗೂ ಗಂಗಾಧರ ಹಿರೇಮಠರಿಂದ ಪ್ರಾರ್ಥನೆ ನಡೆಯಿತು. ರೂಪ ಮತ್ತು ಎಚ್.ಎಂ. ಕರಿಬಸಯ್ಯ ದಂಪತಿ ಶ್ರೀ ರಂಭಾಪುರಿ ಜಗದ್ಗುರುಗಳಿಗೆ ರೇಶ್ಮೆ ಮಡಿ, ಫಲಪುಷ್ಪ ಸಮರ್ಪಿಸಿ ಆಶೀರ್ವಾದ ಪಡೆದರು.

ಸಮಾರಂಭದಲ್ಲಿ ಚಂದ್ರಶೇಖರ ಪೂಜಾರ, ಡಿ. ಕುಮಾರ್, ಲೀಲಾವತಿ ಶಿವಶಂಕರಯ್ಯ, ಎಸ್. ಉಮಾಪತಿ, ಯಶೋಧಮ್ಮ, ರೂಪ, ನಾಗರತ್ನ, ಸುನಂದ ರವೀಂದ್ರ, ಸುಧಾ ಪಂಚಯ್ಯ, ರಮ್ಯ ಕೆ.ವಿ., ವೀರೇಶ, ಜಯಮ್ಮ ಶರಣಪ್ಪಯ್ಯಸ್ವಾಮಿ, ಲಲಿತಮ್ಮ ಶಿವಯೋಗಿ ಸ್ವಾಮಿ, ಪುಷ್ಪ, ನಂದಿನಿ, ಶ್ವೇತಾ, ವನಜಾಕ್ಷಮ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಹರಿಹರದ ಕುಮಾರಿ ಐಶ್ವರ್ಯ ಸ್ವಾಗತಿಸಿದರು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಸಮಾರಂಭದ ಬಳಿಕ ನೂತನ ವೀರಗಂಗಾಧರ ನಿವಾಸದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಪೂಜೆ ನೆರವೇರಿಸಿ ಭಕ್ತರಿಗೆ ಆಶೀರ್ವದಿಸಿದರು. ಇದೇ ಸಂದರ್ಭದಲ್ಲಿ ಹನಗವಾಡಿಯ ಶ್ರೀ ವೀರಭದ್ರಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು.

## ಸಂಕ್ಷಿಪ್ತ ಸುದ್ದಿಗಳು

### ಬಳ್ಳಾರಿ-ಕೊಪ್ಪಳ-ಗದಗ ಮಾರ್ಗದಲ್ಲಿ ಹೊಸ ರೈಲು ಸೇವೆಗೆ ವಿಕಾಸ ವೇದಿಕೆ ಒತ್ತಾಯ

# ರೈಲುಗಳ ಕೊರತೆ; ಉತ್ತರ ಕರ್ನಾಟಕದ ಪ್ರಯಾಣಿಕರಿಗೆ ಸಂಕಷ್ಟ



**ವಿಜಯಸಾಕ್ಷಿ ಸುದ್ದಿ, ಗದಗ**

ಬಳ್ಳಾರಿ-ಕೊಪ್ಪಳ-ಗದಗ ಜಂಕ್ಷನ್ ಮೂಲಕ ಬೆಂಗಳೂರು, ಧಾರವಾಡ ಹಾಗೂ ಹುಬ್ಬಳ್ಳಿ ಸೇರಿದಂತೆ ಪ್ರಮುಖ ನಗರಗಳಿಗೆ ಹೆಚ್ಚಿನ ರೈಲುಗಳ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸಬೇಕು ಎಂದು ಗದಗ ಜಿಲ್ಲಾ ವಿಕಾಸ ವೇದಿಕೆ ಹಾಗೂ ಕುಷ್ಟಗಿ ಹೋರಾಟ ಸಮಿತಿ ಆಗ್ರಹಿಸಿದೆ.

ಈ ಕುರಿತು ಮಾಜಿ ಸಚಿವ ಹಾಗೂ ಕೊಪ್ಪಳ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಮರೇಗೌಡ ಬಯ್ಯಾಪುರ ಅವರನ್ನು ಭೇಟಿ ಮಾಡಿದ ವೇದಿಕೆ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

ಕುಷ್ಟಗಿಗದಗ ಜಂಕ್ಷನ್ ಮೂಲಕ ಬೆಂಗಳೂರು ಹಾಗೂ ಧಾರವಾಡಕ್ಕೆ ವಿಶೇಷ ರೈಲುಗಳನ್ನು ಆರಂಭಿಸಬೇಕು. ಸಿಂಧನೂರಿನಿಂದ ಧಾರವಾಡಹುಬ್ಬಳ್ಳಿ ಮಾರ್ಗವಾಗಿ ಬೆಂಗಳೂರಿಗೆ ತೆರಳಲು ರಾತ್ರಿ ಹಾಗೂ ಮುಂಜಾನೆ ಸಮಯದಲ್ಲಿ ಹೊಸ ರೈಲು ಸೇವೆ ಕಲ್ಪಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ದಾವಣಗೆರೆಹಾವೇರಿ ಮಾರ್ಗವಾಗಿ ಹುಬ್ಬಳ್ಳಿ ತಲುಪುವ ರೈಲುಗಳ ಪೈಕಿ ಹೆಚ್ಚಿನ ರೈಲುಗಳನ್ನು ಬಳ್ಳಾರಿಹೊಸಪೇಟೆಕೊಪ್ಪಳಗದಗ ಮಾರ್ಗವಾಗಿ ಸಂಚರಿಸುವಂತೆ ಆದ್ಯತೆ ನೀಡಬೇಕು ಎಂದು ಮನವಿ ಮಾಡಲಾಗಿದೆ.

ಬಳ್ಳಾರಿಯಿಂದ ಮುಂಜಾನೆ 6 ಗಂಟೆಯ ಬಳಿಕ ಹುಬ್ಬಳ್ಳಿ ಹಾಗೂ ವಿಜಯಪುರ ಮಾರ್ಗಕ್ಕೆ ಸಮರ್ಪಕ ರೈಲು ಸೇವೆ ಇಲ್ಲ. ಮಧ್ಯಾಹ್ನ 3.55ಕ್ಕೆ ತಿರುಪತಿಹುಬ್ಬಳ್ಳಿ ರೈಲು ಇರುವುದನ್ನು ಹೊರತುಪಡಿಸಿ ಸಂಜೆ 5ರ ಬಳಿಕವೂ ರೈಲುಗಳ ಕೊರತೆ ಇದೆ. ಕೊಪ್ಪಳಬಳ್ಳಾರಿ ಭಾಗವು ಕೈಗಾರಿಕೆ ಹಾಗೂ ಪ್ರವಾಸೋದ್ಯಮದ ದೃಷ್ಟಿಯಿಂದ ಮಹತ್ವ ಹೊಂದಿರುವುದರಿಂದ ಈ ಭಾಗಕ್ಕೆ ಹೆಚ್ಚಿನ ರೈಲು ಸೌಲಭ್ಯ ಕಲ್ಪಿಸುವ ಅಗತ್ಯವಿದೆ ಎಂದು ಮುಖಂಡರು ತಿಳಿಸಿದರು.

ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ, ವೀರಭದ್ರಪ್ಪ ಕಬ್ಬಿಣದ, ವೆಂಕಟೇಶ ಕಬಾಡಿ, ಬಸವರಾಜ ಜರತಖನ್ನಿ, ಕುಷ್ಟಗಿ ಹೋರಾಟ ಸಮಿತಿಯ ವೀರೇಶ ಬಂಗಾರಶೆಟ್ಟರ, ಪ್ರಧಾನ ಕಾರ್ಯದರ್ಶಿ ಮಂಜುನಾಥ ಮಹಾಲಿಂಗಪುರ, ಭರತೇಶ ಜೋಷಿ, ಶ್ರೀಧರ ಘೋರ್ಪಡೆ, ಮಹಾಂತಯ್ಯ ಅರಳೆಲೆಮಠ, ಶರಣಪ್ಪ ಲಿಂಗಶೆಟ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಮನವಿಗೆ ಸ್ಪಂದಿಸಿದ ಅಮರೇಗೌಡ ಬಯ್ಯಾಪುರ

**ಕೊಪ್ಪಳ ಹಾಗೂ ಬಳ್ಳಾರಿ ಲೋಕಸಭಾ ಸದಸ್ಯರ ಗಮನಕ್ಕೆ ಸಮಸ್ಯೆಯನ್ನು ತಂದು ಈ ಭಾಗಕ್ಕೆ ಹೆಚ್ಚಿನ ರೈಲ್ವೆ ಸೌಲಭ್ಯ ಕಲ್ಪಿಸುವಂತೆ ಮನವಿ ಮಾಡುವುದಾಗಿ ಭರವಸೆ ನೀಡಿದರು. ತಾವು ಕುಷ್ಟಗಿ ಮಾಜಿ ಶಾಸಕರಾಗಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಗಮನಕ್ಕೂ ಈ ವಿಷಯವನ್ನು ತರುವುದಾಗಿ ತಿಳಿಸಿದರು.**

### 92 ಸಸಿ ನೆಟ್ಟು ಜನ್ಮದಿನೋತ್ಸವ ಆಚರಿಸಿಕೊಂಡ ಎಸ್.ಎಸ್. ಪಾಟೀಲ

# ಅರಣ್ಯವನ ಪ್ರಾಣಿಪಕ್ಷಿಗಳಿಗೆ ಆಶ್ರಯ ತಾಣ

**ವಿಜಯಸಾಕ್ಷಿ ಸುದ್ದಿ, ಗದಗ**

ಜನ್ಮದಿನವನ್ನು ಅದ್ದೂರಿಯಾಗಿ ಆಚರಿಸುವ ಬದಲು ಪರಿಸರ ಸಂರಕ್ಷಣೆಯ ಸಂದೇಶ ಸಾರುವ ರೀತಿಯಲ್ಲಿ ಮಾಜಿ ಸಚಿವ ಎಸ್.ಎಸ್. ಪಾಟೀಲ ಅವರು 92 ಸಸಿಗಳನ್ನು ನೆಡುವ ಮೂಲಕ ತಮ್ಮ 92ನೇ ಜನ್ಮದಿನವನ್ನು ಆಚರಿಸಿಕೊಂಡರು.

ಗದಗ ತಾಲೂಕಿನ ಬಳಗಾನೂರ ರಸ್ತೆಯಲ್ಲಿರುವ ಡಾ. ಪ್ರದೀಪ ಉಗಲಾಟ ಅವರ ಶಿವಶಾಂತ ಜೀವ ವೈವಿಧ್ಯ ಉದ್ಯಾನವನ'ದಲ್ಲಿ ಗದಗಬೆಟಗೇರಿ ರೋಟರಿ ಕ್ಲಬ್, ಇನ್ನರ್‌ವ್ಹೀಲ್ ಕ್ಲಬ್ ಹಾಗೂ ರೋಟ್ರಾಕ್ಟ್ ಕ್ಲಬ್ ವತಿಯಿಂದ ಆಯೋಜಿಸಿದ್ದ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ವ್ಯಾಪಾರೀಕರಣ ಹಾಗೂ ಔದ್ಯೋಗಿಕರಣದ ಪರಿಣಾಮ ಪರಿಸರ ನಾಶವಾಗುತ್ತಿರುವ ಸಂದರ್ಭದಲ್ಲಿ ಅರಣ್ಯವನ ನಿರ್ಮಾಣದ ಮೂಲಕ ಹಸಿರು ಪರಿಸರ ಬೆಳೆಸುತ್ತಿರುವುದು ಶ್ಲಾಘನೀಯ. ಇಂತಹ ಅರಣ್ಯವನಗಳು ಪ್ರಾಣಿಪಕ್ಷಿಗಳಿಗೆ ಆಶ್ರಯ ತಾಣವಾಗುವುದರ ಜತೆಗೆ ಜೀವವೈವಿಧ್ಯ ಸಂರಕ್ಷಣೆಗೆ ನೆರವಾಗುತ್ತವೆ ಎಂದರು.




ಪಶುವೈದ್ಯಕೀಯ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ. ಶಿವಕುಮಾರ ರಡ್ಡೇರ ಮಾತನಾಡಿ, ರಾಜಕೀಯ ಕ್ಷೇತ್ರದ ಹೊರತಾಗಿಯೂ ಎಸ್.ಎಸ್. ಪಾಟೀಲ ಅವರು ವಿವಿಧ ಕ್ಷೇತ್ರಗಳಲ್ಲಿ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಸಸ್ಯಗಳನ್ನು ನೆಡುವ ಮೂಲಕ ಜನ್ಮದಿನ ಆಚರಿಸಿರುವುದು ಉತ್ತಮ ಸಂದೇಶ ನೀಡಿದೆ ಎಂದರು.

ಡಾ. ಜಿ.ಬಿ. ಪಾಟೀಲ ಮಾತನಾಡಿ, ಬಸವಣ್ಣನವರ ತತ್ವಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡಿರುವ ಎಸ್.ಎಸ್. ಪಾಟೀಲರು ಶರಣ ಬದುಕನ್ನು ಸಾರ್ಥಕಗೊಳಿಸಿದ್ದಾರೆ. ಡಾ. ಪ್ರದೀಪ ಉಗಲಾಟ ಹಾಗೂ ನೀಲಾಂಬಿಕಾ ಉಗಲಾಟ ದಂಪತಿ ಅರಣ್ಯವನ ನಿರ್ಮಿಸುವ ಮೂಲಕ ನಿಸರ್ಗ ಸಂಪತ್ತಿನ ಸಂರಕ್ಷಣೆಗೆ ಮುಂದಾಗಿರುವುದು ಅಭಿನಂದನೀಯ ಎಂದರು.

ಪ್ರೊ. ಸಿದ್ದು ಯಾಪಲಪರ್ವಿ ಮಾತನಾಡಿ, ಇಳಿ ವಯಸ್ಸಿನಲ್ಲಿಯೂ ಎಸ್.ಎಸ್. ಪಾಟೀಲ ಅವರ ಪರಿಸರ ಕಾಳಜಿ ಮಾದರಿಯಾಗಿದೆ. ಜನ್ಮದಿನವನ್ನು ಪರಿಸರದೊಂದಿಗೆ ಆಚರಿಸುವ ಮೂಲಕ ಯುವಜನತೆಗೆ ಉತ್ತಮ ಸಂದೇಶ ನೀಡಿದ್ದಾರೆ ಎಂದರು.

ರೋಟರಿ ಕ್ಲಬ್ ಉಪಾಧ್ಯಕ್ಷ ಸುರೇಶ ಕುಂಬಾರ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಾಡುಗಳು ನಾಡಾಗಿ ಪರಿವರ್ತನೆಯಾಗುತ್ತಿರುವುದರಿಂದ ಜೀವವೈವಿಧ್ಯಕ್ಕೆ ಅಪಾರ ಹಾನಿಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಅರಣ್ಯವನ ನಿರ್ಮಾಣದ ಮೂಲಕ ಡಾ. ಪ್ರದೀಪ ಉಗಲಾಟ ಹಾಗೂ ನೀಲಾಂಬಿಕಾ ಉಗಲಾಟ ದಂಪತಿ ಜೀವವೈವಿಧ್ಯಕ್ಕೆ ಆಸರೆಯಾಗಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಎಸ್.ಎಸ್. ಪಾಟೀಲ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಡಾ. ವಿನಯ ಟೀಕಾರೆ ನಿರೂಪಿಸಿದರು. ರೋಟರಿ ಕಾರ್ಯದರ್ಶಿ ಅಕ್ಷಯ ಶೆಟ್ಟಿ ವಂದಿಸಿದರು.

> **ಅರಣ್ಯ ಉಳಿದರೆ ಪರಿಸರ ಉಳಿಯುತ್ತದೆ, ಪರಿಸರ ಉಳಿದರೆ ಮಾನವನ ಬದುಕು ಸುರಕ್ಷಿತವಾಗಿರುತ್ತದೆ. ಅರಣ್ಯ ಪ್ರಕೃತಿಯ ಅಮೂಲ್ಯ ಕೊಡುಗೆಯಾಗಿದ್ದು, ಭೂಮಿಯ ಜೀವಜಲದ ಆಧಾರವಾಗಿದೆ. ಕಪ್ಪತಗುಡ್ಡ ಔಷಧೀಯ ಸಸ್ಯಗಳ ಆಗರವಾಗಿದ್ದು, ಡಾ. ಪ್ರದೀಪ ಉಗಲಾಟ ಅವರ ಸತತ ಪರಿಶ್ರಮದಿಂದ ನಿರ್ಮಾಣವಾಗುತ್ತಿರುವ ಈ ಅರಣ್ಯವನ ಮಾದರಿಯಾಗಿದೆ.**
>
> **- ಎಸ್.ಎಸ್. ಪಾಟೀಲ್,** ಮಾಜಿ ಸಚಿವ

ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಉಗಲಾಟ, ನೀಲಾಂಬಿಕಾ ಉಗಲಾಟ, ಶಿವಾಚಾರ್ಯ ಹೊಸಳ್ಳಿಮಠ, ಮಂಜುಳಾ ಅಕ್ಕಿ, ಸುಲೋಚನಾ ಐಹೋಳಿ, ಸ್ವಾತಿ ಹಿರೇಮಠ, ಚೇತನಾ ಹಂಪಿಮಠ, ಸುಜಾತಾ ಕಾಡಪ್ಪನವರ, ಪ್ರಕಾಶ ಉಗಲಾಟ ಸೇರಿದಂತೆ ರೋಟರಿ ಸದಸ್ಯರು, ಹುಯಿಲಗೋಳ ಗ್ರಾಮಸ್ಥರು ಹಾಗೂ ಉಗಲಾಟ ಕುಟುಂಬದವರು ಉಪಸ್ಥಿತರಿದ್ದರು.

# ಮಡಿವಾಳ ಮಾಚಿದೇವರಿಗೆ ವಿಶೇಷ ಪೂಜೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಭೀಮನ ಅಮಾವಾಸ್ಯೆ ಹಾಗೂ ನಾಗರ ಅಮಾವಾಸ್ಯೆ ಪ್ರಯುಕ್ತ ಪಟ್ಟಣದ ಕೆಇಬಿ ಸಮೀಪದ ರೈತರ ಓಣಿಯಲ್ಲಿರುವ ಮಡಿವಾಳ ಮಾಚಿದೇವರ ದೇವಸ್ಥಾನದಲ್ಲಿ ಮಡಿವಾಳ ಸಮುದಾಯದ ವತಿಯಿಂದ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ಭಕ್ತಿಶ್ರದ್ಧೆಯಿಂದ ನೆರವೇರಿದವು.

ಮಡಿವಾಳರ ಸಂಘದ ತಾಲೂಕು ಅಧ್ಯಕ್ಷ ಎಂ. ರಾಮಪ್ಪ ಪೂಜೆ ಸಲ್ಲಿಸಿ ಮಾತನಾಡಿ, ಸಮುದಾಯದ ವತಿಯಿಂದ ಪ್ರತಿ ಅಮಾವಾಸ್ಯೆಯಂತೆ ಮಾಚಿದೇವರಿಗೆ ವಿಶೇಷ ಪೂಜೆ ಸಲ್ಲಿಸುವ ಪರಂಪರೆ ಮುಂದುವರಿದಿದೆ. ಮಾಚಿದೇವರ ಆದರ್ಶಗಳನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು.

ಸಂಘದ ಉಪಾಧ್ಯಕ್ಷ ಹುಲುಗಪ್ಪ ಮಡಿವಾಳ ಮಾತನಾಡಿ, ಮಡಿವಾಳ ಮಾಚಿದೇವರ ಕಾಯಕನಿಷ್ಠೆ, ಸಮಾನತೆ ಹಾಗೂ ಸಮಾಜಸೇವೆಯ ಸಂದೇಶಗಳನ್ನು ಯುವಜನರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯದರ್ಶಿ ಎಂ. ಶ್ರೀನಿವಾಸ್ ಮಾತನಾಡಿ, ಮಹನೀಯರ ಆದರ್ಶಗಳನ್ನು ಪಾಲಿಸುವ ಮೂಲಕ ಸಮುದಾಯದ ಅಭಿವೃದ್ಧಿಗೆ ಯುವಜನರು ಕೈಜೋಡಿಸಬೇಕು ಎಂದರು.

ಶ್ರೀ ವೀರ ಘಂಟಿ ಮಡಿವಾಳ ಮಾಚಿದೇವರ ದೇವಸ್ಥಾನದಲ್ಲಿ ನಾಗರ ಅಮಾವಾಸ್ಯೆ ಪ್ರಯುಕ್ತ ಅರ್ಚಕ ತಿಪ್ಪೇಸ್ವಾಮಿ ಅವರ ನೇತೃತ್ವದಲ್ಲಿ ಪಂಚಾಮೃತ ಅಭಿಷೇಕ ಸೇರಿದಂತೆ ವಿಶೇಷ ಪೂಜೆ ನೆರವೇರಿತು. ಬಳಿಕ ಎಂ. ರೇಣುಕಾ ತಿಮ್ಮಪ್ಪ ಹಾಗೂ ಕುಟುಂಬದವರು ಭಕ್ತರಿಗೆ ಪ್ರಸಾದ ಸೇವೆ ನೆರವೇರಿಸಿದರು. ಪ್ರಸಾದ ಸೇವೆ ಸಲ್ಲಿಸಿದ ದಂಪತಿಯನ್ನು ಸಮಾಜದ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜದ ಹಿರಿಯರಾದ ಎಂ. ಮಂಜುನಾಥ, ಖಜಾಂಚಿ ಎಂ. ಪ್ರಕಾಶ, ಕೆಇಬಿ ಅಧಿಕಾರಿ ಶೇಖರಪ್ಪ, ಕೆಎಸ್‌ಆರ್‌ಟಿಸಿ ನಾಗರಾಜ್, ಕಡ್ಲಬಾಳು ಸೋಮಶೇಖರ್, ಹೊಸಪೇಟೆ ಹುಲಗಪ್ಪ, ದೇವಸ್ಥಾನ ಕಮಿಟಿ ಸದಸ್ಯರು, ಮಹಿಳೆಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

### ದುರಸ್ತಿ ಕಾರ್ಯ ತಾತ್ಕಾಲಿಕ ಸ್ಥಗಿತ; ತಜ್ಞರ ಸಲಹೆಯಂತೆ ಅಭಿವೃದ್ಧಿಗೆ ಶಾಸಕ ಅರವಿಂದ ಬೆಲ್ಲದ ಸೂಚನೆ

# ಕಲಾಭವನ ಶೀಘ್ರ ಸಾರ್ವಜನಿಕ ಬಳಕೆಗೆ ಮುಕ್ತ!

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡದ ಡಾ. ಮಲ್ಲಿಕಾರ್ಜುನ ಮನ್ಸೂರ ಕಲಾಭವನವನ್ನು ತುರ್ತಾಗಿ ಸಾರ್ವಜನಿಕರ ಬಳಕೆಗೆ ತೆರೆಯಲು ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಅರವಿಂದ ಬೆಲ್ಲದ ಭರವಸೆ ನೀಡಿದರು.

ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಕಲಾಭವನ ಹಾಗೂ ಕಡಪಾ ಮೈದಾನ ಉಳಿಸಿ ಹೋರಾಟ ಸಮಿತಿ ಸದಸ್ಯರೊಂದಿಗೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಕಲಾಭವನದ ದುರಸ್ತಿ ಹಾಗೂ ಕಡಪಾ ಮೈದಾನದ ಬಳಕೆಗೆ ಸಂಬಂಧಿಸಿದಂತೆ ಹೋರಾಟ ಸಮಿತಿಯಿಂದ ತಜ್ಞರ ಸಮಿತಿ ರಚಿಸಬೇಕು. ತಜ್ಞರು ನೀಡುವ ಸಲಹೆಯಂತೆ ಕಲಾಭವನವನ್ನು ಸಾರ್ವಜನಿಕ ಬಳಕೆಗೆ ಸಜ್ಜುಗೊಳಿಸಲಾಗುವುದು. ಸದ್ಯ ನಡೆಯುತ್ತಿರುವ ದುರಸ್ತಿ ಕಾಮಗಾರಿ ಸ್ಥಗಿತಗೊಳಿಸುವಂತೆ ಸೂಚಿಸಿದ್ದು, ತಜ್ಞರ ಸಲಹೆಯಂತೆ ಕಾಮಗಾರಿ ಕೈಗೊಳ್ಳಲು ನಿರ್ಮಿತಿ ಕೇಂದ್ರದ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ಕಲಾಭವನದ ವೈಭವ ಮತ್ತೆ ಮರುಕಳಿಸಬೇಕು ಎಂದು ಪದ್ಮಶ್ರೀ ಪುರಸ್ಕೃತ ಪಂ. ಎಂ. ವೆಂಕಟೇಶಕುಮಾರ ಆಶಿಸಿದರು. ಕಲಾಭವನಕ್ಕೆ ದೊಡ್ಡ ಸಾಂಸ್ಕೃತಿಕ ಇತಿಹಾಸವಿದ್ದು, ಇಲ್ಲಿ ನಡೆಯುತ್ತಿದ್ದ ರಾಷ್ಟ್ರಮಟ್ಟದ ಅಹೋರಾತ್ರಿ ಸಂಗೀತ ಕಾರ್ಯಕ್ರಮಗಳ ವೈಭವ ಮತ್ತೆ ಕಾಣುವಂತಾಗಬೇಕು ಎಂದರು.

ಡಾ. ವೀರಣ್ಣ ರಾಜೂರ ಮಾತನಾಡಿ, ಕಲಾಭವನ ಹಾಗೂ ಕಡಪಾ ಮೈದಾನ ಧಾರವಾಡದ ಅಸ್ಮಿತೆ. ಸಾರ್ವಜನಿಕ ಚಟುವಟಿಕೆ, ಹೋರಾಟ ಹಾಗೂ ಭಾಷಣಗಳಿಗೆ ಕಡಪಾ ಮೈದಾನ ಬಳಕೆಯಾಗುತ್ತ ಬಂದಿದ್ದು, ಅದರ ಮೂಲ ಆಶಯಕ್ಕೆ ಧಕ್ಕೆ ಬಾರದಂತೆ ಸೌಂದರ್ಯೀಕರಣ ಮಾಡಬೇಕು. ಕಲಾವಿದರಿಗೆ ಕೈಗೆಟುಕುವ ದರದಲ್ಲಿ ಕಲಾಭವನ ದೊರೆಯುವಂತಾಗಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಕಾರ್ಯಕ್ರಮ ನಿರ್ವಹಿಸಿದರು. ಸಭೆಯಲ್ಲಿ ಸತೀಶ ತುರಮರಿ, ಡಾ. ಪ್ರಕಾಶ ಗರುಡ, ಬಿ. ಮಾರುತಿ, ಎಂ.ಎಂ. ಚಿಕ್ಕಮಠ, ಬಿ.ಐ. ಇಳಿಗೇರ, ಡಾ. ರಾಜೇಂದ್ರ ಪೊದ್ದಾರ, ಡಾ. ರಾಮು ಮೂಲಗಿ, ಎಫ್.ವಿ. ಚಿಕ್ಕಮಠ, ಡಾ. ಬಿ.ಎಚ್. ಕುರಿ, ಎಐಡಿಎಸ್‌ಒ ಸಂಚಾಲಕ ಲಕ್ಷ್ಮಣ, ಎಚ್.ಜಿ. ದೇಸಾಯಿ, ಲಕ್ಷ್ಮಣ ಬಕ್ಕಾಯಿ, ಸುರೇಶ ಬೇದರೆ, ಎ.ಎಂ. ಖಾನ್, ಬಿ.ಎನ್. ಪೂಜಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ಒಳ್ಳೆಯ ಸ್ಪರ್ಶ, ಕೆಟ್ಟ ಸ್ಪರ್ಶ ಅರಿವು ಮೂಡಿಸಿ; ಡಿಸಿ ಸ್ನೇಹಲ್ ಆರ್

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಅಪ್ರಾಪ್ತ ಮಕ್ಕಳ ಸುರಕ್ಷತೆ ಹಾಗೂ ಆರೋಗ್ಯದ ದೃಷ್ಟಿಯಿಂದ ಶಾಲೆಗಳಲ್ಲಿ ಒಳ್ಳೆಯ ಸ್ಪರ್ಶಕೆಟ್ಟ ಸ್ಪರ್ಶಟಿ ಕುರಿತು ನಿರಂತರವಾಗಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಆರೋಗ್ಯ ಇಲಾಖೆಯ ವಿವಿಧ ಜಾಗೃತಿ ಕಾರ್ಯಕ್ರಮಗಳ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಅಪ್ರಾಪ್ತ ಬಾಲಕಿಯರು ಗರ್ಭಿಣಿಯಾಗುವ ಪ್ರಕರಣಗಳನ್ನು ತಡೆಗಟ್ಟಲು ಶಾಲೆಕಾಲೇಜುಗಳಲ್ಲಿ ಪರಿಣಾಮಕಾರಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದರು.

18 ವರ್ಷದೊಳಗಿನ ಮಕ್ಕಳಿಗೆ ಬಾಲ್ಯವಿವಾಹ ಮಾಡಿಸುವುದು ಕಾನೂನುಬಾಹಿರವಾಗಿದ್ದರೂ ಇಂತಹ ಪ್ರಕರಣಗಳು ಕಂಡುಬರುತ್ತಿವೆ. ಅಪ್ರಾಪ್ತರು ಗರ್ಭಿಣಿಯಾಗಿರುವ ಪ್ರಕರಣಗಳು ಸರ್ಕಾರಿ ಅಥವಾ ಖಾಸಗಿ ಆಸ್ಪತ್ರೆಗಳಲ್ಲಿ ಕಂಡುಬಂದರೆ ವೈದ್ಯರು ತಕ್ಷಣ ಪೊಲೀಸ್ ಇಲಾಖೆ ಅಥವಾ ಮಹಿಳಾ ಮತ್ತು ಮಕ್ಕಳ ರಕ್ಷಣಾ ಘಟಕಕ್ಕೆ ಮಾಹಿತಿ ನೀಡಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ ನಾಯಿ ಕಡಿತ ಪ್ರಕರಣಗಳು ಹೆಚ್ಚಾಗುತ್ತಿದ್ದು, ಜನವರಿಯಿಂದ ಜೂನ್‌ವರೆಗೆ 6,714 ಪ್ರಕರಣಗಳು ದಾಖಲಾಗಿವೆ. ಎಲ್ಲ ಆಸ್ಪತ್ರೆಗಳಲ್ಲಿ ಅಗತ್ಯ ಚುಚ್ಚುಮದ್ದು ಲಭ್ಯವಿರುವಂತೆ ನೋಡಿಕೊಳ್ಳಬೇಕು ಹಾಗೂ ಬೀದಿ ನಾಯಿಗಳ ಸಂತಾನಹರಣಕ್ಕೆ ಕ್ರಮ ಕೈಗೊಳ್ಳಬೇಕು ಎಂದರು.

ತಂಬಾಕು ನಿಯಂತ್ರಣ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವಂತೆ ಸೂಚಿಸಿದ ಅವರು, ಶಾಲೆ, ಕಾಲೇಜು, ಆಸ್ಪತ್ರೆ, ಸರ್ಕಾರಿ ಕಚೇರಿ, ರೈಲು ನಿಲ್ದಾಣ, ಹೋಟೆಲ್ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ಮತ್ತು ಬಳಕೆಗೆ ಕಡಿವಾಣ ಹಾಕಬೇಕು. ನಿಯಮ ಉಲ್ಲಂಘಿಸುವವರ ವಿರುದ್ಧ ದಂಡ ಹಾಗೂ ಕಾನೂನು ಕ್ರಮ ಕೈಗೊಳ್ಳಬೇಕು ಎಂದರು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಪರಶುರಾಮ ಎಫ್.ಕೆ., ಜಿಪಂ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಸೇರಿದಂತೆ ಆರೋಗ್ಯ ಇಲಾಖೆ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಗುರುಧರ್ಮದ ಮಾರ್ಗದಲ್ಲಿ ನಡೆದಾಗ ಜೀವನ ಸಾರ್ಥಕ: ರಂಭಾಪುರಿ ಜಗದ್ಗುರು

# ಸದ್ಗುಣ ಸಚ್ಚಾರಿತ್ರ್ಯದಿಂದ ಬದುಕು ಉಜ್ವಲ

**ವಿಜಯಸಾಕ್ಷಿ ಸುದ್ದಿ, ಚನ್ನಗಿರಿ**

ಜೀವನದಲ್ಲಿ ಭಾಗ್ಯೋದಯವಾಗಬೇಕಾದರೆ ಆದರ್ಶ ಮೌಲ್ಯಗಳನ್ನು ಪಾಲಿಸುವುದರ ಜತೆಗೆ ಪರಿಶ್ರಮ ಮತ್ತು ಸಾಧನೆ ಅಗತ್ಯ. ಸದ್ಗುಣ, ಸಂಸ್ಕಾರ ಹಾಗೂ ಸಚ್ಚಾರಿತ್ರ್ಯದಿಂದ ಬದುಕು ಶ್ರೀಮಂತಗೊಳ್ಳುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಪೀಠದ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ತಾಲೂಕಿನ ತಾವರೆಕೆರೆ ಶಿಲಾಮಠದಲ್ಲಿ ಲಿಂ. ಸಿದ್ಧಲಿಂಗ ಶಿವಾಚಾರ್ಯರ 55ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಬುಧವಾರ ನಡೆದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.



ಏನೇ ಸಂಕಷ್ಟಗಳು ಎದುರಾದರೂ ಏಕಾಗ್ರತೆ ಹಾಗೂ ಆಧ್ಯಾತ್ಮಿಕ ಸಾಧನೆಯ ಮೂಲಕ ಜೀವನದಲ್ಲಿ ಶ್ರೇಯಸ್ಸು ಕಾಣಬೇಕು. ಜಗತ್ತಿನ ಕತ್ತಲೆ ಕಳೆಯಲು ಸೂರ್ಯ ಬೇಕಾದಂತೆ, ಜನರ ಭಾವನೆಗಳನ್ನು ಬೆಳಗಿಸಲು ಗುರುವಿನ ಮಾರ್ಗದರ್ಶನ ಅಗತ್ಯ. ಮಲತ್ರಯಗಳನ್ನು ನಿರ್ಮೂಲನೆ ಮಾಡಿ ಶಿವಜ್ಞಾನದ ಬೆಳಕು ಬೀರುವವನೇ ನಿಜವಾದ ಗುರು. ಕರ್ಮದ ಕತ್ತಲೆ ಕಳೆದು ಧರ್ಮದ ಬೀಜ ಬಿತ್ತಿ ಬದುಕನ್ನು ಬಂಗಾರಗೊಳಿಸಿದ ಗುರುವಿನ ಸ್ಮರಣೆ ಸದಾ ಇರಬೇಕು ಎಂದರು.

ಲಿಂ. ಸಿದ್ಧಲಿಂಗ ಶಿವಾಚಾರ್ಯರು ವಾಕ್ ಸಿದ್ಧಿ ಪಡೆದವರಾಗಿದ್ದು, ಯಂತ್ರಮಂತ್ರಗಳಲ್ಲಿ ಅಪಾರ ಶ್ರದ್ಧೆ ಹೊಂದಿದ್ದರು. ಧರ್ಮ ಹಾಗೂ ಸಮಾಜಮುಖಿ ಕಾರ್ಯಗಳಲ್ಲಿ ಅವರು ತೊಡಗಿಸಿಕೊಂಡಿದ್ದರು.

ಅವರ 55ನೇ ಪುಣ್ಯಸ್ಮರಣೋತ್ಸವ ಆಯೋಜಿಸಿರುವುದು ಭಕ್ತ ಸಮೂಹದ ಸೌಭಾಗ್ಯವಾಗಿದೆ ಎಂದರು.

ಸಮಾರಂಭ ಉದ್ಘಾಟಿಸಿದ ಯುವ ಧುರೀಣ ಮಾಡಾಳು ಮಲ್ಲಿಕಾರ್ಜುನ, ಮನುಷ್ಯ ಎಷ್ಟು ವರ್ಷ ಬದುಕಿದ ಎಂಬುದಕ್ಕಿಂತ ಬದುಕಿರುವಷ್ಟು ದಿನ ಯಾವ ರೀತಿಯಲ್ಲಿ ಬದುಕಿದ ಎಂಬುದು ಮುಖ್ಯ.

ಮಲಿನಗೊಂಡ ಮನಸ್ಸನ್ನು ಶುದ್ಧಗೊಳಿಸಿ ಅರಿವಿನ ದಾರಿಯಲ್ಲಿ ನಡೆಸಲು ಗುರುವಿನ ಮಾರ್ಗದರ್ಶನ ಅಗತ್ಯ ಎಂದರು. ಲಿಂ. ಸಿದ್ಧಲಿಂಗ ಶ್ರೀಗಳು ದೈವಾಂಶ ಸಂಭೂತರಾಗಿ ಸಮಾಜಕ್ಕೆ ಬೆಳಕು ತೋರಿದ ಸದ್ಗುರುವಾಗಿದ್ದರು ಎಂದು ಸ್ಮರಿಸಿದರು.

ನೇತೃತ್ವ ವಹಿಸಿದ್ದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯರು, ಭವಬಂಧನದಿಂದ ಭಕ್ತರನ್ನು ಮುಕ್ತಗೊಳಿಸುವ ಶಕ್ತಿ ಗುರುವಿಗೆ ಇದೆ. ದೇವರು, ಧರ್ಮ ಹಾಗೂ ಗುರುವನ್ನು ಎಂದಿಗೂ ಮರೆಯಬಾರದು. ಲಿಂ. ಸಿದ್ಧಲಿಂಗ ಶಿವಾಚಾರ್ಯರು ಭಕ್ತರ ಕಷ್ಟಗಳನ್ನು ಪರಿಹರಿಸಿ ಸನ್ಮಾರ್ಗದತ್ತ ಕರೆದೊಯ್ದಿದ್ದರು ಎಂದರು.

ತಾವರೆಕೆರೆ ಶಿಲಾಮಠದ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿ, ಸಮರ್ಥ ಗುರುವಿನ ಮಾರ್ಗದರ್ಶನದಲ್ಲಿ ಬದುಕಿದರೆ ವ್ಯಕ್ತಿ ಸಮಾಜದ ಆದರ್ಶ ಹಾಗೂ ಸಂಪನ್ಮೂಲ ವ್ಯಕ್ತಿಯಾಗಿ ರೂಪುಗೊಳ್ಳಲು ಸಾಧ್ಯ. ಲಿಂ. ಸಿದ್ಧಲಿಂಗ ಶಿವಾಚಾರ್ಯರ ಪೂಜಾ, ತಪಸ್ಸು, ಅನುಷ್ಠಾನ ಹಾಗೂ ತತ್ವಸಿದ್ಧಾಂತಗಳ ಮೂಲಕ ಭಕ್ತರನ್ನು ಸನ್ಮಾರ್ಗದತ್ತ ಕೊಂಡೊಯ್ಯುವುದು ಅವರ ಗುರಿಯಾಗಿತ್ತು ಎಂದರು.

ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯರು, ಚನ್ನಗಿರಿ ಕೇದಾರದ ಡಾ. ಕೇದಾರಲಿಂಗ ಶಿವಶಾಂತವೀರ ಶಿವಾಚಾರ್ಯರು, ಶಂಕರದೇವರ ಮಠದ ಚಂದ್ರಶೇಖರ ಶಿವಾಚಾರ್ಯರು, ಬೇರುಗಂಡಿ ಮಠದ ರೇಣುಕ ಮಹಾಂತ ಶಿವಾಚಾರ್ಯರು, ಕೆ. ಬಿದರೆ ಪ್ರಭುಕುಮಾರ ಶಿವಾಚಾರ್ಯರು ಹಾಗೂ ಹಣ್ಣೆ ಹಿರೇಮಠದ ಮರುಳಸಿದ್ಧ ಪಂಡಿತಾರಾಧ್ಯ ಶ್ರೀಗಳು ಪಾಲ್ಗೊಂಡು ನುಡಿನಮನ ಸಲ್ಲಿಸಿದರು.

ತೆಂಡೇಕೆರೆ ಗಂಗಾಧರ ಶಿವಾಚಾರ್ಯರು ಸ್ವಾಗತಿಸಿದರು. ಸಂಗಯ್ಯ ಶಾಸ್ತ್ರಿಗಳು ಪ್ರಾರ್ಥಿಸಿದರು.

> **ದೇವರು, ಧರ್ಮ ಮತ್ತು ಶ್ರೀಗುರುವಿನ ಮೇಲೆ ನಂಬಿಕೆವಿಶ್ವಾಸವನ್ನಿಟ್ಟು ಬಾಳಿದರೆ ಜೀವನ ಸಾರ್ಥಕವಾಗುತ್ತದೆ. ಲಿಂ. ಸಿದ್ಧಲಿಂಗ ಶಿವಾಚಾರ್ಯರು ಧರ್ಮ ಹಾಗೂ ಸಮಾಜಮುಖಿಯಾಗಿ ಸಲ್ಲಿಸಿದ ಸೇವೆ ಭಕ್ತ ಸಮುದಾಯಕ್ಕೆ ಸದಾ ಸ್ಮರಣೀಯ.**
>
> **- ಶ್ರೀ ರಂಭಾಪುರಿ ಜಗದ್ಗುರುಗಳು**

ಬೀರೂರು ರುದ್ರಮುನಿ ಶಿವಾಚಾರ್ಯರು ನಿರೂಪಿಸಿದರು. ಸಮಾರಂಭದ ಬಳಿಕ ಅನ್ನದಾಸೋಹ ನಡೆಯಿತು. ಇದಕ್ಕೂ ಮುನ್ನ ಲೋಕಹಿತ ಹಾಗೂ ಜನಕಲ್ಯಾಣಕ್ಕಾಗಿ ಶ್ರೀಮಠದ ಆವರಣದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಪೂಜೆ ನೆರವೇರಿಸಿ ಭಕ್ತ ಸಮೂಹಕ್ಕೆ ಶುಭ ಹಾರೈಸಿದರು.

# ಗ್ರಂಥಪಾಲಕರ ಜ್ಞಾನಸೇವೆಯನ್ನು ಗೌರವಿಸಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಉತ್ತಮ ಜ್ಞಾನ ಸಂಪಾದನೆಯಲ್ಲಿ ಗ್ರಂಥಾಲಯಗಳ ಪಾತ್ರ ಮಹತ್ವದ್ದಾಗಿದ್ದು, ಜ್ಞಾನ ಸಂಪತ್ತನ್ನು ವ್ಯವಸ್ಥಿತವಾಗಿ ಕಾಪಾಡುವ ಗ್ರಂಥಪಾಲಕರ ಸೇವೆಯನ್ನು ವಿದ್ಯಾರ್ಥಿಗಳು ಗೌರವದಿಂದ ಕಾಣಬೇಕು ಎಂದು ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಕಲ್ಲಯ್ಯ ಹಿರೇಮಠ ಹೇಳಿದರು. ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಬುಧವಾರ ನಡೆದ ಗ್ರಂಥಪಾಲಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತದಲ್ಲಿ ಗ್ರಂಥಪಾಲಕರ ದಿನವನ್ನು ಖ್ಯಾತ ಗ್ರಂಥಾಲಯ ವಿಜ್ಞಾನಿ ಡಾ. ಎಸ್.ಆರ್. ರಂಗನಾಥನ್ ಅವರ ಜನ್ಮದಿನವಾದ ಆಗಸ್ಟ್ 12ರಂದು ಆಚರಿಸಲಾಗುತ್ತದೆ. ಗ್ರಂಥಪಾಲಕರು ಪುಸ್ತಕಗಳು ಹಾಗೂ ಮಾಹಿತಿ ಸಂಪನ್ಮೂಲಗಳನ್ನು ವ್ಯವಸ್ಥಿತವಾಗಿ ನಿರ್ವಹಿಸುವ ಮೂಲಕ ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಮಹತ್ವದ ಕೊಡುಗೆ ನೀಡುತ್ತಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಭರತರಾಜ ಬಳ್ಳಾರಿ, ಎಸ್.ಬಿ. ಗೌಡರ, ಡಾ. ಸಂದೀಪಕುಮಾರ ಬಿ., ಡಾ. ಋಷಿಕೇಶ ಪವಾರ, ಡಾ. ನಿರುಪಾದಿ ಕೆ., ಡಾ. ಡಿ.ಎಲ್. ಪವಾರ, ಗುರುಸ್ವಾಮಿ ಎಂ., ಬಿ.ಎಸ್. ಪಲ್ಲೇದ ಸೇರಿದಂತೆ ಸಿಬ್ಬಂದಿ ಉಪಸ್ಥಿತರಿದ್ದರು. ಪುಂಡಲೀಕ ಮಾದರ ಕಾರ್ಯಕ್ರಮ ನಿರ್ವಹಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka